RNI: KARKAN\2019\78042



ಸಂಪಾದಕರು : ಸಿ.ಎನ್.ಸಮಗಂಡಿ.


# ಸತ್ಯಮಿಥ್ಯ

ನಿಮ್ಮ ಪ್ರತಿಬಿಂಬ ಕನ್ನಡ ದಿನ ಪತ್ರಿಕೆ

Satyamithi Kannada Daily Morning



ಚನ್ನು ಮೆನ್ಸ್‌ವೇರ್
ರೆಡಿಮೇಡ್ ಕ್ಲಾತ್
ಚನ್ನು ಸ್ಟಿಚ್‌ವರ್ಲ್ಡ್
ಬಿ.ಎಸ್.ಎನ್.ಎಲ್. ಆಫೀಸ್ ಹತ್ತಿರ.
ಜೆಂಟ್ಸ್ & ಲೇಡೀಸ್ ಟೇಲರ್
ಗಜೇಂದ್ರಗಡ–582114.
ಸೆಲ್ : 9986982482, 9686165708



ಬ್ಯಾನರ್‌ನಲ್ಲಿ ಪ್ರಧಾನಿ ಮೋದಿ ಫೋಟೊ ಇಲ್ಲವೆಂದು ಸಂಸದ ಬೊಮ್ಮಾಯಿ ಗರಂ 2

ಡೊಳ್ಳಿನ ನಾದಕ್ಕೆ ಹೆಜ್ಜೆ ಹಾಕಿದ ಗಣೇಶನ ಮೆರವಣಿಗೆ 3

ಕರ್ನಾಟಕ ಸಣ್ಣ, ಜಿಲ್ಲಾ ಪತ್ರಿಕೆಗಳ ಸಂಘದ ಅಧ್ಯಕ್ಷರಾಗಿ ದೇವಪ್ಪ ಲಿಂಗದಾಳ ಆಯ್ಕೆ 4


ಸಂಪುಟ(Volume): 1 ಸಂಚಿಕೆ (Issue): 70 ● ಪುಟ (Page): 4 ● ದರ: Rs. 4 ಶನಿವಾರ 19 ಸೆಪ್ಟೆಂಬರ್ 2026 ● 19 SEPTEMBER 2026 ● ಧಾರವಾಡ ● ಹಾವೇರಿ ● ಗದಗ ● ಕೊಪ್ಪಳ ● ವಿಜಯನಗರ ● ರಾಯಚೂರು ● ವಿಜಯಪುರ ● ಬಾಗಲಕೋಟೆ

# ಬರಪೀಡಿತ ತಾಲ್ಲೂಕುಗಳ 2ನೇ ಪಟ್ಟಿಯಲ್ಲೂ ಗದಗ ಜಿಲ್ಲೆಗೆ ನಿರಾಸೆ

ಮುತ್ತು ಗೋಸಲ ಗದಗ

ಕರ್ನಾಟಕದ ಬರಪೀಡಿತ ತಾಲ್ಲೂಕುಗಳ ಎರಡನೇ ಪಟ್ಟಿಯನ್ನು ಗುರುವಾರ ಪ್ರಕಟಿಸಲಾಗಿದ್ದು, ಗದಗ ಜಿಲ್ಲೆಯ ಯಾವುದೇ ತಾಲ್ಲೂಕು ಈ ಪಟ್ಟಿಯಲ್ಲಿ ಸೇರ್ಪಡೆಯಾಗಿಲ್ಲ. ತುರ್ತು ನೆರವಿನ ನಿರೀಕ್ಷೆಯಲ್ಲಿದ್ದ ಜಿಲ್ಲೆಯ ರೈತರಿಗೆ ಇದರಿಂದ ನಿರಾಸೆಯಾಗಿದೆ.

ಮೊದಲ ಹಂತದಲ್ಲಿ ಘೋಷಣೆಯಾದ 101 ಬರಪೀಡಿತ ತಾಲ್ಲೂಕುಗಳ ಪೈಕಿ ಗಜೇಂದ್ರಗಡ ತಾಲ್ಲೂಕು ಮಾತ್ರ ತೀವ್ರ ಬರಪೀಡಿತ ತಾಲ್ಲೂಕುಗಳ ಪಟ್ಟಿಯಲ್ಲಿ ಸ್ಥಾನ ಪಡೆದಿತ್ತು. ಜಿಲ್ಲೆಯ ಉಳಿದ ತಾಲ್ಲೂಕುಗಳನ್ನು ಬರಪೀಡಿತವೆಂದು ಘೋಷಿಸಬೇಕೆಂದು ರೈತರು ಹಾಗೂ ರೈತಪರ ಸಂಘಟನೆಗಳು ವಿವಿಧ ಹೋರಾಟಗಳ ಮೂಲಕ ಸರ್ಕಾರವನ್ನು ಒತ್ತಾಯಿಸುತ್ತ ಬಂದಿವೆ. ಇತ್ತೀಚೆಗೆ ನರಗುಂದ ಬಂದ್ ನಡೆಸಿ ಆಕ್ರೋಶ ವ್ಯಕ್ತಪಡಿಸಲಾಗಿತ್ತು.

ಸೆಪ್ಟೆಂಬರ್ ಆರಂಭದಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಜಿಲ್ಲೆಗೆ ಭೇಟಿ ನೀಡಿ, ಕದಾಂಪೂರ ಹಾಗೂ ಕುರ್ತಕೋಟಿ ಭಾಗಗಳಲ್ಲಿ ಬೆಳೆ ಹಾನಿಯನ್ನು ಪರಿಶೀಲಿಸಿದ್ದರು. ಬಳಿಕ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಜಿಲ್ಲೆಯ ಬರ ಪರಿಸ್ಥಿತಿಯ ಕುರಿತು ಸಮಗ್ರ ಮಾಹಿತಿ ಪಡೆದುಕೊಂಡಿದ್ದರು. ಈ ಸಂದರ್ಭದಲ್ಲಿ ಮಾತನಾಡಿದ್ದ ಅವರು, “ಹೆಲಿಕಾಪ್ಟರ್‌ನಿಂದ ನೋಡಿದಾಗ ಜಿಲ್ಲೆಯ ಯಾವ ಭಾಗದಲ್ಲೂ ಹಸಿರು ಕಾಣಿಸಲಿಲ್ಲ. ಜಿಲ್ಲೆಯ ಎಲ್ಲ ತಾಲ್ಲೂಕುಗಳು ಬರಪೀಡಿತವೆಂದು ಘೋಷಿಸಲು ಅರ್ಹವಾಗಿವೆ. ಆದರೆ, ಎನ್‌ಡಿಆರ್‌ಎಫ್ ಮಾನದಂಡದ ಅನುಸಾರ ಮುಂದಿನ ಕ್ರಮ ಕೈಗೊಳ್ಳಲಾಗುವುದು” ಎಂದು ತಿಳಿಸಿದ್ದರು. ಇದರಿಂದ ಜಿಲ್ಲೆಯ ಉಳಿದ ತಾಲ್ಲೂಕುಗಳೂ ಶೀಘ್ರದಲ್ಲೇ ಬರಪೀಡಿತವೆಂದು ಘೋಷಣೆಯಾಗುವ ನಿರೀಕ್ಷೆ ರೈತರಲ್ಲಿ ಮೂಡಿತ್ತು.

ಜೂನ್ 1ರಿಂದ ಸೆಪ್ಟೆಂಬರ್ 16ರವರೆಗೆ ದಾಖಲಾಗಿರುವ ಮಳೆ ಪ್ರಮಾಣ, ಮಣ್ಣಿನ ತೇವಾಂಶ, ಬೆಳೆಗಳ ಸ್ಥಿತಿ ಸೇರಿದಂತೆ ವಿವಿಧ ವೈಜ್ಞಾನಿಕ ಮಾನದಂಡಗಳ ಆಧಾರದ ಮೇಲೆ 17 ಜಿಲ್ಲೆಗಳ 53 ತಾಲ್ಲೂಕುಗಳನ್ನು ಮೂರನೇ ಹಂತದ ಪ್ರತ್ಯಕ್ಷ ಪರಿಶೀಲನೆಗೆ ಆಯ್ಕೆ ಮಾಡಲಾಗಿದೆ.

ಈ ಪಟ್ಟಿಯಲ್ಲಿ ಗದಗ ಜಿಲ್ಲೆಯ ನರಗುಂದ, ಶಿರಹಟ್ಟಿ ಹಾಗೂ ಲಕ್ಷ್ಮೇಶ್ವರ ತಾಲ್ಲೂಕುಗಳು ಸೇರಿವೆ. ಈ ಮೂರು ತಾಲ್ಲೂಕುಗಳನ್ನು ‘ಸಾಧಾರಣ ಬರ’ ಎಂದು ಗುರುತಿಸಲಾಗಿದೆ. ಪ್ರತ್ಯಕ್ಷ ಪರಿಶೀಲನೆಯನ್ನು ನಿಖರ ಹಾಗೂ ಪಾರದರ್ಶಕವಾಗಿ ನಡೆಸಲು ‘ಕ್ರಾಪ್ ಲಾಸ್ ಜಿಟಿ’ ಮೊಬೈಲ್ ಆಪ್ ಬಳಸುವಂತೆ ಸೂಚಿಸಲಾಗಿದೆ. ಜಿಯೊಟ್ಯಾಗ್ ಮಾಡಲಾದ ಛಾಯಾಚಿತ್ರಗಳು, ಜಿಪಿಎಸ್ ಮಾಹಿತಿ, ಜಮೀನಿನ ವಿವರ ಹಾಗೂ ಬೆಳೆ ಹಾನಿಯ ಪ್ರಮಾಣವನ್ನು ಸ್ಥಳದಲ್ಲಿಯೇ ದಾಖಲಿಸುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ. ಬೆಳೆ ಆಯ್ಕೆ, ಪರಿಶೀಲನಾ ತಂಡ ರಚನೆ ಹಾಗೂ ಗ್ರಾಮಗಳ ನಿಗದಿಗೆ ಸೆಪ್ಟೆಂಬರ್ 17 ಮತ್ತು 18ರಂದು, ಸ್ಥಳ ಪರಿಶೀಲನೆಗೆ ಸೆಪ್ಟೆಂಬರ್ 19 ಮತ್ತು 20ರಂದು ಹಾಗೂ ಅಂತಿಮ ವರದಿ ಸಲ್ಲಿಸಲು ಸೆಪ್ಟೆಂಬರ್ 21ರ ಗಡುವು ನೀಡಲಾಗಿದೆ. ಪ್ರತ್ಯಕ್ಷ ಪರಿಶೀಲನೆಯ ಬಳಿಕ ಸಲ್ಲಿಕೆಯಾಗುವ ವರದಿಯು ಮುಂದಿನ ದಿನಗಳಲ್ಲಿ ಬರ ಘೋಷಣೆ ಹಾಗೂ ಪರಿಹಾರ ಕ್ರಮ ಕೈಗೊಳ್ಳಲು ಸಹಕಾರಿಯಾಗಲಿದೆ ಎಂದು ಆದೇಶದಲ್ಲಿ ತಿಳಿಸಲಾಗಿದೆ.





## ಬರಿದಾಗುವ ಭೀತಿಯಲ್ಲಿ ಗದಗಿನ ಐತಿಹಾಸಿಕ ಭೀಷ್ಮ ಕೆರೆ ಒಡಲು

ಸತ್ಯಮಿಥ್ಯ ಸುದ್ದಿಮೂಲ ಗದಗ:

ನಗರದ ಜೀವನಾಡಿಯಂತಿರುವ ಐತಿಹಾಸಿಕ ಭೀಷ್ಮ ಕೆರೆಗೆ ಮಳೆಗಾಲದ ಸಮಯದಲ್ಲೂ ನೀರು ತುಂಬದೇ ಖಾಲಿಯಾಗುವ ಭೀತಿ ಎದುರಾಗಿದೆ. 0.12 ಟಿಎಂಸಿ ನೀರು ಸಂಗ್ರಹಣಾ ಸಾಮರ್ಥ್ಯ ಹೊಂದಿರುವ ಈ ಬೃಹತ್ ಕೆರೆಗೆ ನದಿ ಪಾತ್ರದಿಂದ ನೀರು ಎತ್ತಿ ಹಾಯಿಸುವ ಮಹತ್ವಾಕಾಂಕ್ಷೆಯ ಯೋಜನೆಯಿದ್ದರೂ, ಅಧಿಕಾರಿಗಳ ನಿರ್ಲಕ್ಷ್ಯ ಮತ್ತು ತಾಂತ್ರಿಕ ಸಮಸ್ಯೆಯಿಂದಾಗಿ ಕೆರೆ ಖಾಲಿಯಾಗುವ ಹಂತ ತಲುಪಿದೆ.

**ಖಾಲಿ ಉಳಿದ ಬೃಹತ್ ಕೆರೆ: ಪ್ರಮುಖ ಕಾರಣಗಳು:** ಮೋಟರ್‌ಗಳ ತೀವ್ರ ಅಭಾವ: ನದಿ ಪಾತ್ರ, ಕಲಕೇರಿ ಹಾಗೂ ಚುರ್ಚಿಹಾಳ ಜಾಕ್‌ವೆಲ್‌ಗಳಲ್ಲಿ ಒಟ್ಟು 22 ನೀರೆತ್ತುವ ಬೃಹತ್ ಮೋಟರ್‌ಗಳನ್ನು ಅಳವಡಿಸಲಾಗಿತ್ತು. ಆದ–ರೆ ಸೂಕ್ತ ನಿರ್ವಹಣೆಯಿಲ್ಲದೆ ಪ್ರಸ್ತುತ ಕೇವಲ 6 ಮೋಟರ್‌ಗಳು ಮಾತ್ರ ಚಾಲನೆಯಲ್ಲಿವೆ. ಉಳಿದ ಮೋಟರ್‌ಗಳು ಕೆಟ್ಟುನಿಂತರೂ ದುರಸ್ತಿ ಕಂಡಿಲ್ಲ. ಅರ್ಧಕ್ಕೇ ಸ್ಥಗಿತಗೊಳ್ಳುತ್ತಿರುವ ಪಂಪಿಂಗ್: ನದಿ ಪಾತ್ರದಿಂದ ಲಿಫ್ಟ್ ಮೂಲಕ ಹೊರಟ ನೀರು ಗದಗಿನ ಭೀಷ್ಮ ಕೆರೆ ತಲುಪಲು ಕನಿಷ್ಠ 12 ಗಂಟೆಗಳ ನಿರಂತರ ಪಂಪಿಂಗ್ ಅಗತ್ಯವಿದೆ. ಆದರೆ ಅಧಿಕಾರಿಗಳು ದಿನಕ್ಕೆ ಕೇವಲ 6ರಿಂದ 7 ಗಂಟೆ ಮಾತ್ರ ಮೋಟರ್‌ಗಳನ್ನು ಚಾಲನೆ ಮಾಡುತ್ತಿದ್ದು, ನೀರು ಕೆರೆಗೆ ತಲುಪುತ್ತಲೇ ಇಲ್ಲ. ಮಳೆಗಾಲದಲ್ಲೂ ಕೆರೆ ಬರಿದಾಗುತ್ತಿರುವುದು ಗದಗ ಜನತೆಯಲ್ಲಿ ಆತಂಕ ಮೂಡಿಸಿದ್ದು, ನೀರಾವರಿ ನಿಗಮ ಮತ್ತು ರಾಜ್ಯ ಸರ್ಕಾರ ತಕ್ಷಣವೇ ಎಚ್ಚೆತ್ತು–ಕೊಂಡು ಸ್ಥಗಿತಗೊಂಡಿರುವ ಮೋಟರ್‌ಗಳನ್ನು ದುರಸ್ತಿಗೊಳಿಸಿ ಭೀಷ್ಮ ಕೆರೆಗೆ ನೀರು ಹರಿಸಬೇಕೆಂದು ಸಾರ್ವಜನಿಕರು ಆಗ್ರಹಿಸಿದ್ದಾರೆ.

### ಹಿಮ್ಮುಖ ಹರಿಯುತ್ತಿರುವ ನೀರು

**ಪೈಪ್‌ಲೈನ್‌ನಲ್ಲಿ ನೀರು ಹಿಂತಿರುಗದಂತೆ ತಡೆಯುವ 'ನಾನ್ ರಿಟರ್ನ್' ವ್ಯವಸ್ಥೆಯಲ್ಲಿ ಗಂಭೀರ ದೋಷ ಕಾಣಿಸಿಕೊಂಡಿದೆ. ನಾಲ್ಕೈದು ಗಂಟೆ ಪಂಪ್ ಮಾಡಿದ ನೀರು, ಮೋಟರ್ ಆಫ್ ಮಾಡುತ್ತಿದ್ದಂತೆಯೇ ಪೈಪ್‌ಲೈನ್‌ನಿಂದ ಮರಳಿ ಹಿಂದಕ್ಕೆ ಹರಿಯುತ್ತಿದೆ. ಅನುದಾನದ ಕೊರತೆಯ ನೆಪ: ಕೆಟ್ಟುಹೋದ ಮೋಟರ್‌ಗಳ ದುರಸ್ತಿಗೆ ಅಗತ್ಯ ಹಣವಿಲ್ಲ ಎಂಬ ಸಬೂಬು ನೀಡುತ್ತಿರುವ ಕರ್ನಾಟಕ ನೀರಾವರಿ ನಿಗಮದ (ಕೆ ಎನ್ ಎನ್ ಎಲ್ ) ಅಧಿಕಾರಿಗಳು, ಯೋಜನೆಯ ಸಮರ್ಪಕ ನಿರ್ವಹಣೆಯಲ್ಲಿ ಸಂಪೂರ್ಣ ವಿಫಲರಾಗಿದ್ದಾರೆ.**

# ಗೃಹಲಕ್ಷ್ಮೀ ಮರುಪರಿಶೀಲನೆ ಪಾರದರ್ಶಕವಾಗಿರಲಿ: ಆಸೂಟಿ

ಸತ್ಯಮಿಥ್ಯ ಸುದ್ದಿಮೂಲ ಗದಗ :




ಗೃಹಲಕ್ಷ್ಮೀ ಯೋಜನೆಯ ಉದ್ದೇಶಕ್ಕೆ ಧ–ಕ್ಕೆಯಾಗದಂತೆ ಅರ್ಹ ಫಲಾನುಭವಿಗಳಿಗೆ ಸಕಾಲದಲ್ಲಿ ಸೌಲಭ್ಯ ತಲುಪಿಸುವುದು ಹಾಗೂ ಅನರ್ಹರಿಗೆ ಸರ್ಕಾರದ ಹಣ ಸೋರಿಕೆಯಾಗದಂತೆ ತಡೆಯುವುದು ಮರುಪರಿಶೀಲನೆಯ ಪ್ರಮುಖ ಉದ್ದೇಶವಾಗಿದೆ. ಈ ಕಾರ್ಯವನ್ನು ಜವಾಬ್ದಾರಿಯುತವಾಗಿ ಹಾಗೂ ಪಾರದರ್ಶಕವಾಗಿ ಕೈಗೊಳ್ಳಬೇಕು ಎಂದು ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಆಸೂಟಿ ಹೇಳಿದರು.

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಹಯೋಗದಲ್ಲಿ ಸೆಪ್ಟೆಂಬರ್ 18 ರಂದು ಆಯೋಜಿಸಿದ್ದ ಗೃಹಲಕ್ಷ್ಮೀ ಯೋಜನೆಯ ಮರುಪರಿಶೀಲನಾ ಅರ್ಜಿಗಳ ಕುರಿತು ಜಿಲ್ಲಾ ಮಟ್ಟದ ತರಬೇತುದಾರರ ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಗೃಹಲಕ್ಷ್ಮೀ ಯೋಜನೆಯಡಿ ಪ್ರತಿ ತಿಂಗಳು ಫಲಾನುಭವಿಗಳಿಗೆ ನೀಡಲಾಗುತ್ತಿರುವ ಎರಡು ಸಾವಿರ ರೂಪಾಯಿ ಆರ್ಥಿಕ ನೆರವನ್ನು ಮಹಿಳೆಯರು ಸ್ವಾವಲಂಬನೆ, ಮಕ್ಕಳ ವಿದ್ಯಾಭ್ಯಾಸ, ಕೃಷಿ ಚಟುವಟಿಕೆ, ಹೈನುಗಾರಿಕೆ, ವೈದ್ಯಕೀಯ ವೆಚ್ಚ ಸೇರಿದಂತೆ ವಿವಿಧ ಅಗತ್ಯಗಳಿಗೆ ಸದ್ಬಳಕೆ ಮಾಡಿಕೊಳ್ಳುತ್ತಿದ್ದಾರೆ. ಗದಗ ಜಿಲ್ಲೆಯಲ್ಲಿ ಸುಮಾರು 2.74 ಲಕ್ಷ ಫಲಾನುಭವಿಗಳಿಗೆ ಯೋಜನೆಯ ಸೌಲಭ್ಯ ತಲುಪಿದೆ ಎಂದು ತಿಳಿಸಿದರು.

ಯೋಜನೆ ಜಾರಿಯಾಗಿ ಮೂರು ವರ್ಷಗಳು ಕಳೆದಿರುವ ಹಿನ್ನೆಲೆಯಲ್ಲಿ ಫಲಾನುಭವಿಗಳ ವಿವರಗಳನ್ನು ಮರುಪರಿಶೀಲಿಸುವ ಅಗತ್ಯವಿದೆ. ಈ ಅವಧಿಯಲ್ಲಿ ಕೆಲವು ಫಲಾನುಭವಿಗಳು ಮೃತಪಟ್ಟಿರುವುದಾಗಿ ದಾಖಲಾಗಿದ್ದರೂ, ಅವರ ಕುಟುಂಬದ ಸದಸ್ಯರು ಯೋಜನೆಯ ಹಣ ಪಡೆಯುತ್ತಿರುವ ಪ್ರಕರಣಗಳು ಗಮನಕ್ಕೆ ಬಂದಿವೆ. ಇಂತಹ ಪ್ರಕರಣಗಳಿಂದ ಸರ್ಕಾರದ ಹಣ ಅನರ್ಹವಾಗಿ ಬಳಕೆಯಾಗುವ ಸಾಧ್ಯತೆ ಇರುವುದರಿಂದ ಫಲಾನುಭವಿಗಳ ನೈಜ ಸ್ಥಿತಿಗತಿಯನ್ನು ಪರಿಶೀಲಿಸಬೇಕು. ಅರ್ಹತೆ ಹೊಂದಿರುವ ಫಲಾನುಭವಿಗಳಿಗೆ ಮಾತ್ರ ಯೋಜನೆಯ ಸೌಲಭ್ಯ ಮುಂದುವರಿಸುವಂತೆ ಕ್ರಮವಹಿಸಬೇಕು ಎಂದು ಹೇಳಿದರು.

ಫಲಾನುಭವಿಗಳ ಮನೆಗಳಿಗೆ ಭೇಟಿ ನೀಡಿ ಶಾಂತ ಹಾಗೂ ಸೌಹಾರ್ದಯುತ ರೀತಿಯಲ್ಲಿ ಮಾಹಿತಿ ಸಂಗ್ರಹಿಸಬೇಕು. ಅಗತ್ಯ ದಾಖಲೆಗಳನ್ನು ಪರಿಶೀಲಿಸಿ ಫಲಾನುಭವಿಗಳ ನೈಜಸ್ಥಿತಿಗತಿಯನ್ನು ಖಚಿತಪಡಿಸಿಕೊಳ್ಳಬೇಕು. ಈ ಸಂದರ್ಭದಲ್ಲಿ ಅರ್ಹ ಫಲಾನುಭವಿಗಳಿಗೆ ಯಾವುದೇ ರೀತಿಯ ತೊಂದರೆ ಅಥವಾ ಅನ್ಯಾಯವಾಗದಂತೆ ಅಧಿಕಾರಿಗಳು ಹಾಗೂ ಸಿಬ್ಬಂದಿ ಎಚ್ಚರಿಕೆಯಿಂದ ಕಾರ್ಯನಿರ್ವಹಿಸಬೇಕು ಎಂದು ನಿರ್ದೇಶನ ನೀಡಿದರು. ಫಲಾನುಭವಿಗಳ ಮಾಹಿತಿಯಲ್ಲಿ ಯಾವುದೇ ವ್ಯತ್ಯಾಸ ಕಂಡುಬಂದಲ್ಲಿ ನಿಯಮಾನುಸಾರ ಪರಿಶೀಲಿಸಿ, ಅರ್ಹತೆ ಹೊಂದಿರುವವರಿಗೆ ಮಾತ್ರ ಯೋಜನೆಯ ಸೌಲಭ್ಯ ದೊರೆಯುವಂತೆ ಕ್ರಮ ವಹಿಸಬೇಕು ಎಂದು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾದಿಕಾರದ ಅಧ್ಯಕ್ಷ ಬಿ.ಬಿ.ಅಸೂಟಿ ತಿಳಿಸಿದರು.

ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಮಾತನಾಡಿ, ಗೃಹಲಕ್ಷ್ಮೀ ಯೋಜನೆಯಡಿ ಅರ್ಹ ಮಹಿಳೆಯರಿಗೆ ಸರ್ಕಾರದಿಂದ ದೊರೆಯುತ್ತಿರುವ ಆರ್ಥಿಕ ನೆರವು ಕುಟುಂಬದ ಜೀವನಮಟ್ಟ ಸುಧಾರಣೆಗೆ ಸಹಕಾರಿಯಾಗಿದೆ. ಯೋಜನೆಯ ಉದ್ದೇಶಕ್ಕೆ ಧಕ್ಕೆಯಾಗದಂತೆ ಅರ್ಹ ಫಲಾನುಭವಿಗಳನ್ನು ಗುರುತಿಸಿ, ಅವರಿಗೆ ಸಕಾಲದಲ್ಲಿ ಸೌಲಭ್ಯ ದೊರೆಯುವಂತೆ ಕ್ರಮವಹಿಸಬೇಕು ಎಂದರು.

ಗೃಹಲಕ್ಷ್ಮೀ ಯೋಜನೆಯ ಸೌಲಭ್ಯವು ಮಹಿಳೆಯರ ಆರ್ಥಿಕ ಸ್ವಾವಲಂಬನೆಗೆ ನೆರವಾಗುತ್ತಿರುವ ಹಿನ್ನೆಲೆಯಲ್ಲಿ ಅರ್ಹ ಪ್ರತಿಯೊಬ್ಬ ಫಲಾನುಭವಿಗೂ ಯೋಜನೆಯ ಪ್ರಯೋಜನ ತಲುಪಿಸುವುದು ಅಧಿಕಾರಿಗಳ ಜವಾಬ್ದಾರಿಯಾಗಿದೆ ಜಿಲ್ಲಾಧಿಕಾರಿ ಎಂದು ಸಿ.ಎನ್. ಶ್ರೀಧರ್ ಹೇಳಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕಿ ರಾಧಾ ಮಣ್ಣೂರು, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾದಿಕಾರದ ಉಪಾಧ್ಯಕ್ಷ ಪಿ.ಬಿ. ಅಳಗವಾಡಿ, ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಅಶೋಕ್ ಮಂದಾಲಿ, ದೇವಪ್ಪ ಮುರನಾಳ, ನಾಗರಾಜ ಮಡಿವಾಳರ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ಐಎಎಸ್ ಅಧಿಕಾರಿ ಜ್ಞಾನೇಂದ್ರ ಕುಮಾರ್ ಗೆಳತಿಗೆ ಸಿಐಡಿ ನೋಟಿಸ್

ಸತ್ಯಮಿಥ್ಯ ಸುದ್ದಿಮೂಲ ಬೆಂಗಳೂರು:




ಕರ್ನಾಟಕ ಲೋಕಸೇವಾ ಆಯೋಗ (ಕೆ ಪಿ ಎಸ್ ಸಿ ) ನಡೆಸಿದ ಪಶುವೈದ್ಯಾಧಿಕಾರಿ ಹುದ್ದೆಗಳ ನೇಮಕಾತಿ ಅಕ್ರಮ ಪ್ರಕರಣದ ತನಿಖೆ ತೀವ್ರಗೊಂಡಿದ್ದು, ಸಿಐಡಿ ಅಧಿಕಾರಿಗಳು ಮಹತ್ವದ ಸುಳಿವುಗಳನ್ನು ಹೊರಗೆಳೆದಿದ್ದಾರೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಅಮಾನತುಗೊಂಡಿರುವ ಐಎಎಸ್ ಅಧಿಕಾರಿ ಜ್ಞಾನೇಂದ್ರ ಕುಮಾರ್ ಅವರ ಆಸ್ತಿ, ಬ್ಯಾಂಕ್ ವಹಿವಾಟುಗಳು ಹಾಗೂ ಚಿನ್ನಾಭರಣ ಖರೀದಿ ಕುರಿತು ತನಿಖಾ ತಂಡ ತೀವ್ರ ಪರಿಶೀಲನೆ ನಡೆಸುತ್ತಿದೆ.

ಸಹಕಾರ ಸಂಘದ ಖಾತೆಗಳನ್ನು ಪರಿಶೀಲಿಸುವ ಸಂದರ್ಭದಲ್ಲಿ ಓಂ ಶ್ರೀ ಲಕ್ಷ್ಮೀ ಸೌಹಾರ್ದ ಸೊಸೈಟಿಗೆ ಸಂಬಂಧಿಸಿದ ಬಸವರಾಜು ಅವರ ಬ್ಯಾಂಕ್ ಖಾತೆಯಿಂದ ಪ್ರತಿಷ್ಠಿತ ಜ್ಯುವೆಲ್ಲರಿ ಶೋರೂಂಗೆ 56 ಲಕ್ಷ ಹಣ ವರ್ಗಾವಣೆಯಾಗಿರುವುದು ಪತ್ತೆಯಾಗಿದೆ. ಈ ಪೈಕಿ ಜುಲೈ ತಿಂಗಳಿನಲ್ಲಿ ಬೆಂಗಳೂರಿನ ಡಿಕನ್ಸನ್ ರಸ್ತೆಯಲ್ಲಿರುವ ಜ್ಯುವೆಲ್ಲರಿ ಮಳಿಗೆಯಿಂದ ಅಯೋಧ್ಯೆ ಮೂಲದ ಗೆಳತಿಗೆ 26 ಲಕ್ಷ ಮೌಲ್ಯದ ಚಿನ್ನಾಭರಣ ಖರೀದಿಸಿ ಉಡುಗೊರೆಯಾಗಿ ನೀಡಲಾಗಿತ್ತು. ಇದನ್ನು ಸಿಐಡಿ ಈಗಾಗಲೇ ವಶಪಡಿಸಿಕೊಂಡಿದೆ. ಇದೀಗ ಅದೇ ಗೆಳತಿಗೆ ಏಪ್ರಿಲ್ ತಿಂಗಳಿನಲ್ಲಿ ಮತ್ತೊಮ್ಮೆ 30 ಲಕ್ಷ ಮೌಲ್ಯದ ಚಿನ್ನ ಕೊಡಿಸಿರುವುದು ಬೆಳಕಿಗೆ ಬಂದಿದ್ದು, ಆ ಚಿನ್ನಾಭರಣವನ್ನು ತಕ್ಷಣ ಹಿಂತಿರುಗಿಸುವಂತೆ ಸಿಐಡಿ ನೋಟಿಸ್ ನೀಡಿದೆ.

ಇದರಜೊತೆಗೆಕೆಂಪೇಗೌಡಅಂತರರಾಷ್ಟ್ರೀಯ ವಿಮಾನ ನಿಲ್ದಾಣದ ಸಮೀಪ ಜ್ಞಾನೇಂದ್ರ ಕುಮಾರ್ ಅವರ ಸಹೋದರ ಕಮಲಾಪತಿ ಅವರಹೆಸರಿನಲ್ಲಿಐಷಾರಾಮಿವಿಲ್ಲಾವೊಂದನ್ನು ಖರೀದಿಸಲಾಗಿದ್ದು, ಈ ಆಸ್ತಿಗೆ ಬಳಸಲಾದ ಹಣದ ಮೂಲದ ಬಗ್ಗೆಯೂ ಅಧಿಕಾರಿಗಳು ತನಿಖೆ ಮುಂದುವರಿಸಿದ್ದಾರೆ.

2024ರ ಫೆಬ್ರವರಿಯಿಂದ 2026ರ ಮಾರ್ಚ್‌ವರೆಗೆ ಏಕಖಅ ಪರೀಕ್ಷಾ ನಿಯಂತ್ರಕರಾಗಿ ಕಾರ್ಯನಿರ್ವಹಿಸಿದ್ದ ಜ್ಞಾನೇಂದ್ರ ಕುಮಾರ್ ಅವರ ವಿರುದ್ಧದ ನೇಮಕಾತಿ ಅಕ್ರಮದ ತನಿಖೆ ಮುಂದುವರಿದಿದ್ದು, ಈ ಹಣದ ವರ್ಗಾವಣೆಯ ಉದ್ದೇಶ ಹಾಗೂ ಬಳಕೆಯ ಹಿಂದಿರುವ ಸಂಪೂರ್ಣ ಮಾಹಿತಿ ತನಿಖೆಯ ನಂತರ ಹೊರಬೀಳಬೇಕಿದೆ.

# ಕೊಪ್ಪಳದಲ್ಲಿ ವಂದೇ ಮಾತರಂ ಸಪ್ಪಳ

## ಗಂಗಾವತಿಯ ಅಧಿಕಾರಿಗಳ ವಿರುದ್ಧ ಕ್ರಮಕ್ಕೆ ಸಚಿವ ತಂಗಡಗಿ ಎಚ್ಚರಿಕೆ

## ಕೇಂದ್ರ ಸರ್ಕಾರಕ್ಕೆ ದೂರು ನೀಡಲು ಸಂಸದ ಬಸವರಾಜ ಬೊಮ್ಮಾಯಿ ನಿರ್ಧಾರ

ಸತ್ಯಮಿಥ್ಯ ಸುದ್ದಿಮೂಲ ಗಂಗಾವತಿ:



ಇತ್ತೀಚೆಗೆ ನಗರದಲ್ಲಿ ಆಯೋಜಿಸಲಾಗಿದ್ದ 'ಪ್ರಜಾಸೇವಾ ಆಂದೋಲನ' ಕಾರ್ಯಕ್ರಮದ ವೇಳೆ ರಾಷ್ಟಗೀತೆ 'ವಂದೇ ಮಾತರಂ' ಅನ್ನು ಪೂರ್ತಿಯಾಗಿ ಹಾಡಿಸಿದ ಅಧಿಕಾರಿಗಳ ವಿರುದ್ಧ ಕ್ರಮ ಜರುಗಿಸಲಾಗುವುದು ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವ ಶಿವರಾಜ್ ತಂಗಡಗಿ ಹೇಳಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, "ಶಾಸಕ ಗಲಿ ಜನಾರ್ದನ ರೆಡ್ಡಿ ಅವರ ಒತ್ತಡಕ್ಕೆ ಮಣಿದು ಅಧಿಕಾರಿಗಳು ವಂದೇ ಮಾತರಂ ಗೀತೆಯನ್ನು ಪೂರ್ತಿಯಾಗಿ ಹಾಡಿಸಬಾರದಿತ್ತು. ಇದು ಸರ್ಕಾರದ ನಿಯಮಾವಳಿಗಳ ಸ್ಪಷ್ಟ ಉಲ್ಲಂಘನೆಯಾಗಿದೆ. ಶಾಸಕ ಜನಾರ್ದನ ರೆಡ್ಡಿ ಸರ್ಕಾರಕ್ಕಿಂತ ದೊಡ್ಡವರಲ್ಲ. ಸರ್ಕಾರ ನಿಯಮಾವಳಿ ರೂಪಿಸುವಾಗ ಎಲ್ಲ ಅಂಶಗಳನ್ನು ಪರಿಶೀಲಿಸಿ ಕ್ರಮ ಕೈಗೊಂಡಿರುತ್ತದೆ, ಅಧಿಕಾರಿಗಳು ಅದನ್ನು ಪಾಲಿಸಬೇಕು. ಹೀಗಾಗಿ ಗೀತೆಯನ್ನು ಪೂರ್ತಿಯಾಗಿ ಹಾಡಿಸಿದ ಅಧಿಕಾರಿಗಳ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಲಾಗುವುದು" ಎಂದರು.

ಇದೇ ವೇಳೆ, ಬಿಜೆಪಿ ನಾಯಕರು ವಂದೇ ಮಾತರಂ ಗೀತೆಯನ್ನು ಪೂರ್ತಿಯಾಗಿ ಹಾಡಿದರೆ ರಾಜೀನಾಮೆ ನೀಡುವುದಾಗಿ ಸಚಿವ ಪ್ರಿಯಾಂಕ್ ಖರ್ಗೆ ನೀಡಿರುವ ಹೇಳಿಕೆಯನ್ನು ಸಮರ್ಥಿಸಿಕೊಂಡ ಸಚಿವರು, "ಖರ್ಗೆ ಅವರ ಹೇಳಿಕೆಯಲ್ಲಿ ಯಾವುದೇ ತಪ್ಪಿಲ್ಲ. ಬಿಜೆಪಿಯವರಿಗೆ ವಂದೇ ಮಾತರಂ ಗೀತೆಯ ಮಹತ್ವ ಮತ್ತು ಅರ್ಥವೇ ಗೊತ್ತಿಲ್ಲ" ಎಂದು ವಾಗ್ದಾಳಿ ನಡೆಸಿದರು.

ಕೇಂದ್ರಕ್ಕೆ ದೂರು ಸಲ್ಲಿಸಲು ಬೊಮ್ಮಾಯಿ ತೀರ್ಮಾನ:

ಮತ್ತೊಂದೆಡೆ ಈ ಬೆಳವಣಿಗೆಗೆ ಪ್ರತಿಕ್ರಿಯಿಸಿರುವ ಸಂಸದ ಹಾಗೂ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, "ವಂದೇ ಮಾತರಂ ಗೀತೆಯನ್ನು ಪೂರ್ಣ ಪ್ರಮಾಣದಲ್ಲಿ ಹಾಡಬೇಕು. ಆದರೆ ರಾಜ್ಯ ಸರ್ಕಾರ ಕೇಂದ್ರ ಸರ್ಕಾರದ ಆದೇಶಕ್ಕೆ ವಿರುದ್ಧವಾಗಿ ನಡೆದುಕೊಳ್ಳುತ್ತಿದೆ. ಇದು ಅಕ್ಷಮ್ಯ ಅಪರಾಧ. ಈ ಕುರಿತು ಕೇಂದ್ರ ಸರ್ಕಾರ, ಗೃಹ ಸಚಿವರು ಹಾಗೂ ಸಂಬಂಧಿಸಿದ ಅಧಿಕಾರಿಗಳಿಗೆ ದೂರು ನೀಡುತ್ತೇನೆ" ಎಂದು ತಿಳಿಸಿದ್ದಾರೆ.

ಸತ್ಯ ಮಿಥ್ಯ
ನಿಮ್ಮ ಪ್ರತಿಬಿಂಬ ಕನ್ನಡ ದಿನ ಪತ್ರಿಕೆ

SATYA MITHI
Kannada Daily Morning

## ಕರಾಟೆ ಸ್ಪರ್ಧೆ: ಗಜೇಂದ್ರಗಡದ ವಿದ್ಯಾರ್ಥಿ ಮಿಥುನ ಬಾರಕೇರ ರಾಜ್ಯಮಟ್ಟಕ್ಕೆ ಆಯ್ಕೆ

**ಸತ್ಯಮಿಥ್ಯ ಸುದ್ದಿಮೂಲ ಗಜೇಂದ್ರಗಡ:**
ಸಮೀಪದಸೂಡಿಗ್ರಾಮದಗುರುಮಹಾಂತೇಶಕನ್ನಡಹಿರಿಯಪ್ರಾಥಮಿಕ



ಶಾಲೆ ವಿದ್ಯಾರ್ಥಿ ಮಿಥುನ ಬಾರಕೇರ ಜಿಲ್ಲಾ ಮಟ್ಟದ ಕರಾಟೆ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದು, ರಾಜ್ಯ ಮಟ್ಟಕ್ಕೆ ಆಯ್ಕೆಯಾಗಿದ್ದಾನೆ. ಗದಗ ನಗರದ ಕೆ.ಎಚ್. ಪಾಟೀಲ ಕ್ರೀಡಾಂಗಣದಲ್ಲಿ ನಡೆದ ಜಿಲ್ಲಾ ಮಟ್ಟದ ಪ್ರಾಥಮಿಕ ಶಾಲೆಗಳ ಕ್ರೀಡಾಕೂಟದ 14ರಿಂದ 17 ವರ್ಷದೊಳಗಿನ ಬಾಲಕರ 40 ಕೆ.ಜಿ ವಿಭಾಗದ ಕರಾಟೆ ಸ್ಪರ್ಧೆಯಲ್ಲಿ ಮಿಥುನ ಬಾರಕೇರ ಪ್ರಥಮ ಸ್ಥಾನ ಪಡೆದಿದ್ದಾನೆ.
ಆಮೂಲಕರಾಜ್ಯಮಟ್ಟಕ್ಕೆಆಯ್ಕೆಯಾಗಿದ್ದಾನೆ ಎಂದು ಶಾಲೆಯ ಪ್ರಕಟಣೆ ತಿಳಿಸಿದೆ.

## ಬ್ಯಾನರ್‌ನಲ್ಲಿ ಪ್ರಧಾನಿ ಮೋದಿ ಫೋಟೊ ಇಲ್ಲವೆಂದು ಸಂಸದ ಬೊಮ್ಮಾಯಿ ಗರಂ

**ಸತ್ಯಮಿಥ್ಯ ಸುದ್ದಿಮೂಲ ಗದಗ:**
ನಗರದ ಎಪಿಎಂಸಿ ಆವರಣದ ಸ್ವಾಮಿ ವಿವೇಕಾನಂದ ಸಭಾಂಗಣದಲ್ಲಿ ಆಯೋಜಿಸಿದ್ದಸಾಮಾಜಿಕಅಧಿಕಾರಶಿಬಿರ ಕಾರ್ಯಕ್ರಮದ ಬ್ಯಾನರ್‌ನಲ್ಲಿ ಪ್ರಧಾನಿ ಮೋದಿ ಫೋಟೊ ಮುದ್ರಿಸಿಲ್ಲವೆಂದು ಸಂಸದ ಬಸವರಾಜ ಬೊಮ್ಮಾಯಿ ಅಸಮಾಧಾನ ವ್ಯಕ್ತಪಡಿಸಿದರು.
ಕೇಂದ್ರ ಸರ್ಕಾರದ ಕಾರ್ಯಕ್ರಮವಾಗಿದ್ದರೂ ಪ್ರಧಾನಿ ಮೋದಿ ಅವರ ಫೋಟೊ ಹಾಕಿಲ್ಲ.
ಈ ಮೂಲಕ ಅಧಿಕಾರಿಗಳು ಶಿಷ್ಟಾಚಾರ ಉಲ್ಲಂಘನೆ ಮಾಡಿದ್ದಾರೆ. ಕಾರ್ಯಕ್ರಮದ ಬ್ಯಾನರ್‌ನಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಫೋಟೊ ಇರುವುದಕ್ಕೆ ಆಕ್ಷೇಪವಿಲ್ಲ. ಆದರೆ, ಪ್ರಧಾನಿ ಮೋದಿ ಫೋಟೊ ಕೈಬಿಟ್ಟಿದ್ದು ಸರಿಯಲ್ಲ' ಎಂದು ಗರಂ ಆದರು.
ಇದು ಅಂಗವಿಕಲರಿಗಾಗಿ ಹಮ್ಮಿಕೊಂಡ ಕಾರ್ಯಕ್ರಮ. ಅವರಿಗಾಗಿ ಇಲ್ಲಿರುವೆ. ಇಲ್ಲದಿದ್ದರೆ ಕಾರ್ಯಕ್ರಮದಿಂದ ಹೊರ ನಡೆಯುತ್ತಿದ್ದೆ' ಎಂದರು
ಕಾರ್ಯಕ್ರಮದ ಬ್ಯಾನರ್‌ನಲ್ಲಿ ಡಿ.ಕೆ. ಶಿವಕುಮಾರ್ ಅವರ ಫೋಟೊ ಪಕ್ಕದಲ್ಲಿ ಪ್ರಧಾನಿ ಮೋದಿ ಅವರು ಅಂಗವಿಕಲರೊಂದಿಗೆ ಸಮಾಲೋಚನೆ ನಡೆಸಿದ ಮೂರು ಫೋಟೊಗಳನ್ನು ಮುದ್ರಿಸಲಾಗಿತ್ತು




## ಪುಣ್ಯಸ್ಮರಣೆ ಅಂಗವಾಗಿ ಅಂಗನವಾಡಿ ಮಕ್ಕಳಿಗೆ ನೋಟ್‌ಬುಕ್, ಸಿಹಿತಿಂಡಿ ವಿತರಣೆ

**ಸತ್ಯಮಿಥ್ಯ ಸುದ್ದಿಮೂಲ ತಾವರಗೇರಿ:**
ತಾಲೂಕಿನ ಸಮೀಪದ ಕನ್ನಾಳ ಗ್ರಾಮದಲ್ಲಿ ಮಾಜಿ ಗ್ರಾಮ ಪಂಚಾಯಿತಿ ಸದಸ್ಯರಾದ ಶ್ರೀ ಮಹೇಶ ಪಾಟೀಲ ಅವರು ತಮ್ಮ ತಾಯಿಯ ಪುಣ್ಯಸ್ಮರಣೆಯ ಅಂಗವಾಗಿ ಕನ್ನಾಳದ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯ ಅಂಗಳದಲ್ಲಿರುವ ಅಂಗನವಾಡಿ ಕೇಂದ್ರದ ಮಕ್ಕಳಿಗೆ ಉಚಿತವಾಗಿ ನೋಟ್‌ಬುಕ್ ಹಾಗೂ ಸಿಹಿತಿಂಡಿಗಳನ್ನು ವಿತರಿಸಿದರು.
ತಮ್ಮ ಪ್ರೀತಿಯ ತಾಯಿಯ ನೆನಪನ್ನು ಸ್ಮರಿಸುವ ನಿಟ್ಟಿನಲ್ಲಿ ಅಂಗನವಾಡಿ ಮಕ್ಕಳಿಗೆ ಉಪಯುಕ್ತ ಶೈಕ್ಷಣಿಕ ಸಾಮಗ್ರಿಗಳನ್ನು ನೀಡುವ ಮೂಲಕ ಮಹೇಶ ಪಾಟೀಲ ಅವರು ತಾಯಿಯ ಪುಣ್ಯಸ್ಮರಣೆಯನ್ನು ಅರ್ಥಪೂರ್ಣ ಹಾಗೂ ಮಾದರಿಯಾಗಿ ಆಚರಿಸಿದರು.
ಈ ಸಂದರ್ಭದಲ್ಲಿ ಗ್ರಾಮದ ಹಿರಿಯರು, ಶಾಲೆಯ ಶಿಕ್ಷಕ ವೃಂದದವರು ಹಾಗೂ ಅಂಗನವಾಡಿ ಸಿಬ್ಬಂದಿ ಉಪಸ್ಥಿತರಿದ್ದು, ಮಹೇಶ ಪಾಟೀಲ ಅವರ ಈ ಸೇವೆಯನ್ನು ಶ್ಲಾಘಿಸಿದರು.



## ಪ್ರಧಾನಿ ನರೇಂದ್ರ ಮೋದಿ ಜನ್ಮದಿನದ ಅಂಗವಾಗಿ ವಿಶೇಷ ಪೂಜೆ, ಪ್ರಸಾದ ವಿತರಣೆ

**ಸತ್ಯಮಿಥ್ಯ ಸುದ್ದಿಮೂಲ ಮುಳಗುಂದ:**
ಗದಗ ತಾಲೂಕಿನ ಮುಳಗುಂದ ಪಟ್ಟಣದ ತಿಗಡಿ ಗರಡಿ ಆವರಣದಲ್ಲಿ ಹಿಂದೂ ಮಹಾಗಣಪತಿ ಸಿದ್ಧಿ ವಿನಾಯಕನನ್ನು ಸತತ ಐದನೇ ವರ್ಷವೂ ಪ್ರತಿಷ್ಠಾಪಿಸಲಾಗಿದ್ದು, ಪ್ರಧಾನಿ ನರೇಂದ್ರ ಮೋದಿ ಅವರ ಜನ್ಮದಿನದ ಅಂಗವಾಗಿ ಭಕ್ತ ಸಮೂಹದ ಸಮ್ಮುಖದಲ್ಲಿ ವಿಶೇಷ ಪೂಜಾ ಕಾರ್ಯಕ್ರಮವನ್ನು ಶ್ರದ್ಧಾ-ಭಕ್ತಿಯಿಂದ ನೆರವೇರಿಸಲಾಯಿತು.
ಹಿಂದೂ ಮಹಾಗಣಪತಿ ತಿಗಡಿ ಗರಡಿ ಮುಳಗುಂದ ವೇದಿಕೆಯ ವತಿಯಿಂದ ಆಯೋಜಿಸಿದ್ದ ಪೂಜಾ ಕಾರ್ಯಕ್ರಮದಲ್ಲಿ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಸಿದ್ಧಿ ವಿನಾಯಕನಿಗೆ ವಿಶೇಷ ಪೂಜೆ ಸಲ್ಲಿಸಿದರು. ಇದೇ ಸಂದರ್ಭದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಆಯುರಾರೋಗ್ಯ, ಶಕ್ತಿ ಹಾಗೂ ದೀರ್ಘಾಯುಷ್ಯ ಲಭಿಸಲಿ ಎಂದು ವಿಶೇಷ ಪ್ರಾರ್ಥನೆ ಸಲ್ಲಿಸಲಾಯಿತು.
ಮುಳಗುಂದದ ತಿಗಡಿ ಗರಡಿ ಹಿಂದೂ ಮಹಾಗಣಪತಿ ಉತ್ಸವವು ಸತತ ಐದನೇ ವರ್ಷವೂ ನಡೆಯುತ್ತಿದ್ದು, ಈ ಬಾರಿ ಪ್ರತಿಷ್ಠಾಪಿಸಲಾಗಿರುವ ಗಣಪತಿ ಮೂರ್ತಿಯನ್ನು ಸತತ ಎರಡನೇ ಬಾರಿಗೆ ಕು. ರಾಘು ಈಶಪ್ಪ ಗುಲಗಂಜಿ ಅವರು ಕೊಡುಗೆಯಾಗಿ ನೀಡಿದ್ದಾರೆ ಎಂದು ಆಯೋಜಕರು ತಿಳಿಸಿದರು.
ಪೂಜಾ ಕಾರ್ಯಕ್ರಮದ ಬಳಿಕ ಭಕ್ತರಿಗೆ ಪ್ರಸಾದ ವಿತರಿಸಲಾಯಿತು. ಈ ಸಂದರ್ಭದಲ್ಲಿ ಹಿಂದೂ ಮಹಾಗಣಪತಿ ತಿಗಡಿ ಗರಡಿ ಸಂಘದ ಯುವಕರು ಹಾಗೂ ಭಕ್ತರು ಉಪಸ್ಥಿತರಿದ್ದರು.



## ವಲಯ ಮಟ್ಟದ ಕ್ರೀಡಾಕೂಟದಲ್ಲಿ ಎಸ್.ಎ.ವಿ.ವಿ.ಪಿ. ಕಿವುಡ ಮಕ್ಕಳ ಸಾಧನೆ

**ಸತ್ಯಮಿಥ್ಯ ಸುದ್ದಿಮೂಲ ನರೇಗಲ್ಲ :**
ಪಟ್ಟಣದ ಎಸ್.ಎ.ವಿ.ವಿ.ಪಿ. ಸಮಿತಿಯ ಕಿವುಡ ಮಕ್ಕಳ ವಸತಿಯುತ ಪ್ರಾಥಮಿಕ ಶಾಲೆಯ ವಿದ್ಯಾರ್ಥಿಗಳು ನರೇಗಲ್ಲ ವಲಯ ಮಟ್ಟದ ಪ್ರಾಥಮಿಕ ಶಾಲೆಗಳ ಕ್ರೀಡಾಕೂಟದಲ್ಲಿ ವಿವಿಧ ಕ್ರೀಡೆಗಳಲ್ಲಿ ಉತ್ತಮ ಪ್ರದರ್ಶನ ನೀಡಿ, ತಾಲೂಕು ಮಟ್ಟದ ಕ್ರೀಡಾಕೂಟಕ್ಕೆ ಆಯ್ಕೆಯಾಗಿದ್ದಾರೆ.
ಸಮೀಪದ ಜಕ್ಕಲಿ ಗ್ರಾಮದ ಎಸ್.ಎ.ಜೆ.ಡಿ. ಸರ್ಕಾರಿ ಪ್ರೌಢಶಾಲೆಯ ಆವರಣದಲ್ಲಿ ಗುರುವಾರ ನಡೆದ ವಲಯ ಮಟ್ಟದ ಕ್ರೀಡಾಕೂಟದಲ್ಲಿ ವಿದ್ಯಾರ್ಥಿಗಳು ಉತ್ಸಾಹದಿಂದ ಭಾಗವಹಿಸಿ ಗಮನಾರ್ಹ ಸಾಧನೆ ಮಾಡಿದ್ದಾರೆ.
100 ಮೀಟರ್ ಓಟದಲ್ಲಿ ದೇವರಾಜ ಪ್ರಥಮ, ಲಾಂಗ್ ಜಂಪ್‌ನಲ್ಲಿ ಪ್ರೀತಮಗೌಡ ಪ್ರಥಮ ಹಾಗೂ ರಿಲೇ ಓಟದಲ್ಲಿ ಮಹ್ಮದ್ ಇಶಾನ್ ಪ್ರಥಮ ಸ್ಥಾನ ಪಡೆದುಕೊಂಡಿದ್ದಾರೆ. ಅಡತಡೆ ಓಟದಲ್ಲಿ ಮಹ್ಮದ್ ಇಶಾನ್ ದ್ವಿತೀಯ, 200 ಮೀಟರ್ ಓಟದಲ್ಲಿ ಪ್ರಜ್ವಲ್ ತೃತೀಯ ಹಾಗೂ 400 ಮೀಟರ್ ಓಟದಲ್ಲಿ ದೇವರಾಜ ತೃತೀಯ ಸ್ಥಾನ ಗಳಿಸಿದ್ದಾರೆ.
ವಿಶೇಷ ಚೇತನ ಮಕ್ಕಳಿಗೆ ಕ್ರೀಡಾಕ್ಷೇತ್ರದಲ್ಲಿಯೂ ಸಮಾನ ಅವಕಾಶ, ಸೂಕ್ತ ತರಬೇತಿ ಹಾಗೂ ಪ್ರೋತ್ಸಾಹ ದೊರೆತರೆ ಅವರು ತಮ್ಮಲ್ಲಿರುವ ಪ್ರತಿಭೆಯನ್ನು ಸಮರ್ಥವಾಗಿ ಪ್ರದರ್ಶಿಸಬಲ್ಲರು ಎಂಬುದಕ್ಕೆ ವಿದ್ಯಾರ್ಥಿಗಳ ಈ ಸಾಧನೆ ಸಾಕ್ಷಿಯಾಗಿದೆ.
ವಿದ್ಯಾರ್ಥಿಗಳ ಸಾಧನೆಗೆ ಸಂಸ್ಥೆಯ ಅಧ್ಯಕ್ಷರಾದ ಜಗದ್ಗುರು ಮುಪ್ಪಿನ



ಬಸವಲಿಂಗ ಮಹಾಸ್ವಾಮಿಗಳು, ಪ್ರಧಾನ ಕಾರ್ಯದರ್ಶಿಗಳು, ಆಡಳಿತಾಧಿಕಾರಿಗಳು, ಚೇರ್‌ಮನ್, ಮಂಡಳಿ ಸದಸ್ಯರು, ಮುಖ್ಯೋಪಾಧ್ಯಾಯರು, ಸಿಬ್ಬಂದಿ ವರ್ಗ ಹಾಗೂ ಪಾಲಕರು ಹರ್ಷ ವ್ಯಕ್ತಪಡಿಸಿ ವಿದ್ಯಾರ್ಥಿಗಳನ್ನು ಅಭಿನಂದಿಸಿದ್ದಾರೆ.

## ಸೆ.26ರಂದು ಗದಗ ಬಂದ್‌ಗೆ ರೈತ ಸಂಘಟನೆಗಳ ಕರೆ

**ಗದಗ:** ಅತಿಯಾದ ಮಳೆ ಕೊರತೆಯಿಂದಾಗಿ ಗದಗ ತಾಲೂಕಿನಲ್ಲಿ ರೈತರು ತೀವ್ರ ಸಂಕಷ್ಟ ಎದುರಿಸುತ್ತಿದ್ದರೂ, ತಾಲೂಕನ್ನು ಬರಪೀಡಿತ ಪ್ರದೇಶಗಳ ಪಟ್ಟಿಗೆ



ಸೇರಿಸದಿರುವುದನ್ನು ಖಂಡಿಸಿ, ಗದಗ ತಾಲೂಕನ್ನು ತಕ್ಷಣ ಬರಪೀಡಿತ ಪ್ರದೇಶವೆಂದು ಘೋಷಿಸಬೇಕೆಂದು ಆಗ್ರಹಿಸಿ ಸೆ.26ರಂದು ಗದಗ ಬೆಟಗೇರಿ ಅವಳಿ ನಗರ ಬಂದ್‌ಗೆ ಕರೆ ನೀಡಲಾಗಿದೆ.
ಗದಗ ಜಿಲ್ಲಾ ರೈತ ಹಿತಾಭಿವೃದ್ಧಿ ಸಂಘ ಕರ್ನಾಟಕ ಬೆಳೆ ವಿಮಾ ಹೋರಾಟ ಸಮಿತಿಯ ಹಾಗೂ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ನೇತೃತ್ವದಲ್ಲಿ ಸೆಪ್ಟೆಂಬರ್ 26ರಂದು ಬಂದ್ ಹಮ್ಮಿಕೊಳ್ಳಲಾಗಿದ್ದು, ಈ ಕುರಿತು ರೈತ ಹಿತಾಭಿವೃದ್ಧಿ ಸಂಘದ ಕಾರ್ಯಾಧ್ಯಕ್ಷ ಪರಮೇಶ್ವರಪ್ಪ ಜಂತ್ಲಿ ತಿಳಿಸಿದ್ದಾರೆ.
ಗದಗ ತಾಲೂಕಿನಲ್ಲಿ ಮಳೆ ಕೊರತೆಯಿಂದಾಗಿ ಕೃಷಿ ಚಟುವಟಿಕೆಗಳು ಸಂಕಷ್ಟಕ್ಕೆ ಸಿಲುಕಿವೆ. ಬೆಳೆ ನಷ್ಟ ಅನುಭವಿಸುತ್ತಿರುವ ರೈತರಿಗೆ ಸರ್ಕಾರದಿಂದ ಸೂಕ್ತ ಪರಿಹಾರ ಹಾಗೂ ಬರಪರಿಹಾರ ಸೌಲಭ್ಯಗಳು ದೊರೆಯಬೇಕಾದ ಹಿನ್ನೆಲೆಯಲ್ಲಿ ತಾಲೂಕನ್ನು ಬರಪೀಡಿತ ಪ್ರದೇಶವೆಂದು ಘೋಷಿಸುವಂತೆ ಸಂಘಟನೆಗಳು ಒತ್ತಾಯಿಸಿವೆ.
ನಗರದ ಎಲ್ಲ ಸಂಘ-ಸಂಸ್ಥೆಗಳು, ವಿವಿಧ ಸಂಘಟನೆಗಳು ಹಾಗೂ ಜಿಲ್ಲೆಯ ಸಮಸ್ತ ರೈತ ಬಾಂಧವರು ಬಂದ್‌ಗೆ ಬೆಂಬಲ ನೀಡಿ, ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಹೋರಾಟವನ್ನು ಯಶಸ್ವಿಗೊಳಿಸಬೇಕು ಎಂದು ಪರಮೇಶ್ವರಪ್ಪ ಜಂತ್ಲಿ ಮನವಿ ಮಾಡಿದ್ದಾರೆ. ನಗರದ ಜಿಲ್ಲಾಧಿಕಾರಿಗಳ ಕಚೇರಿಗೆ ಎನ,ಬಿ ತುಕ್ಕಪ್ಪನವರ್ ನಾಗರಾಜ್ ಮೆಣಸಗಿ ಸತೀಶ್, ಅಜ್ಜನಗೌಡ ಹಿರೇಮನಿ ಪಾಟೀಲ್ ವಸಂತ ಪಡಗದ, ರುದ್ರಯ್ಯ ಹಿರೇಮಠ ಎಸ್,ಎಫ್ ಪಾಟೀಲ್ ಕರಿಬಸಯ್ಯ ನಲವತ್ತವಾಡಮಠ ಸೇರಿದಂತೆ ಹಲವರು ಗದಗ್ ಬೆಟಗೇರಿ ಅವಳಿ ನಗರ ಬಂದ್ ಕುರಿತಂತೆ ಜಿಲ್ಲಾಧಿಕಾರಿಗಳಿಗೆ ತಿಳಿಸಲಾಯಿತು.

## ಮೊದಲ ಪ್ರಯತ್ನದಲ್ಲೇ ನೀಟ್ ಉತ್ತೀರ್ಣ

**ಸತ್ಯಮಿಥ್ಯ ಸುದ್ದಿಮೂಲ ಗದಗ:**
ಗ್ರಾಮೀಣ ಪ್ರದೇಶದ ವಿದ್ಯಾರ್ಥಿ ಕುಮಾರ ಗುರುಕಿರಣ ಡಿ. ದ್ಯಾಮಣ್ಣವರ ಅವರು ಮೊದಲ ಪ್ರಯತ್ನದಲ್ಲಿಯೇ ನೀಟ್ ಪರೀಕ್ಷೆಯಲ್ಲಿ ಉತ್ತಮ ಸಾಧನೆ ಮಾಡಿ ಬೆಂಗಳೂರಿನ ಪ್ರತಿಷ್ಠಿತ ಎಂವಿಜೆ ವೈದ್ಯಕೀಯ ವಿಜ್ಞಾನ ಮತ್ತು ಸಂಶೋಧನಾ ಕೇಂದ್ರ ವೈದ್ಯಕೀಯ ಶಿಕ್ಷಣಕ್ಕಾಗಿ ಆಯ್ಕೆಯಾಗಿದ್ದಾರೆ.
ಕುಮಾರ ಗುರುಕಿರಣ ಅವರು ಬೆಳ್ಳಟ್ಟಿ ಗ್ರಾಮದ ಅವತಾರ ಪ್ರಾಥಮಿಕ ಶಾಲೆಯಲ್ಲಿ 1ರಿಂದ 5ನೇ ತರಗತಿವರೆಗೆ ವ್ಯಾಸಂಗ ಮಾಡಿದ್ದು, 6ರಿಂದ 10ನೇ ತರಗತಿವರೆಗೆ ಮುಂಡರಗಿ ತಾಲೂಕಿನ ಕೊರ್ಲಹಳ್ಳಿ ಜವಾಹರ ನವೋದಯ ವಿದ್ಯಾಲಯದಲ್ಲಿ ಶಿಕ್ಷಣ ಪಡೆದಿದ್ದಾರೆ. ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಶೇ.91ರಷ್ಟು ಅಂಕಗಳನ್ನು ಗಳಿಸಿ ಉತ್ತೀರ್ಣರಾಗಿದ್ದಾರೆ. ಬಳಿಕ ದಾವಣಗೆರೆಯ ಸರ್ ಎಂ.ವಿ. ಮಹಾವಿದ್ಯಾಲಯದಲ್ಲಿ ಪಿಯುಸಿ ವ್ಯಾಸಂಗ ಮಾಡಿ ಶೇ.92ರಷ್ಟು ಅಂಕಗಳನ್ನು ಪಡೆದುಕೊಂಡಿದ್ದಾರೆ.
ನಂತರ ನೀಟ್ ಪರೀಕ್ಷೆಯನ್ನು ಮೊದಲ ಪ್ರಯತ್ನದಲ್ಲಿಯೇ ಯಶಸ್ವಿಯಾಗಿ ಉತ್ತೀರ್ಣರಾಗಿ ಬೆಂಗಳೂರಿನ ಪ್ರತಿಷ್ಠಿತ ಎಂವಿಜೆ ವೈದ್ಯಕೀಯ ವಿಜ್ಞಾನ ಮತ್ತು ಸಂಶೋಧನಾ ಕೇಂದ್ರ ವೈದ್ಯಕೀಯ ಶಿಕ್ಷಣಕ್ಕೆ ಆಯ್ಕೆಯಾಗಿರುವುದು ಕುಟುಂಬಸ್ಥರು, ಶಿಕ್ಷಕರು ಹಾಗೂ ಗ್ರಾಮಸ್ಥರಲ್ಲಿ ಸಂತಸ ಮೂಡಿಸಿದೆ.
ಕುಮಾರ ಗುರುಕಿರಣ ಅವರ ತಂದೆ-ತಾಯಿ ಇಬ್ಬರೂ ಸರ್ಕಾರಿ ಶಿಕ್ಷಕರಾಗಿದ್ದಾರೆ. ತಾಯಿ ಬೆಳ್ಳಟ್ಟಿ ಕೆಪಿಎಸ್ ಪ್ರೌಢಶಾಲೆಯಲ್ಲಿ ಇಂಗ್ಲಿಷ್ ಶಿಕ್ಷಕಿಯಾಗಿ ಸೇವೆ ಸಲ್ಲಿಸುತ್ತಿದ್ದು, ತಂದೆ ಶ್ರೀ ದ್ಯಾಮಪ್ಪ ದ್ಯಾಮಣ್ಣವರ ಅವರು ಪ್ರಾಥಮಿಕ ಶಾಲಾ ಶಿಕ್ಷಕರಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಅಲ್ಲದೇ ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಶಿರಹಟ್ಟಿ ತಾಲೂಕು ಘಟಕದ ಪ್ರಧಾನ ಕಾರ್ಯದರ್ಶಿಯಾಗಿಯೂ ಕಾರ್ಯನಿರ್ವಹಿಸುತ್ತಿದ್ದಾರೆ.
ಕುಟುಂಬದಲ್ಲಿಯೂ ಶಿಕ್ಷಣಕ್ಕೆ ಹೆಚ್ಚಿನ ಪ್ರೋತ್ಸಾಹವಿದೆ. ಅವರ ಹಿರಿಯ ದೊಡ್ಡಪ್ಪ ಧಾರವಾಡದ ನೀರಾವರಿ ಇಲಾಖೆಯಲ್ಲಿ ಕಾರ್ಯಪಾಲಕ ಎಂಜಿನಿಯರ್ ಆಗಿದ್ದು, ಕಿರಿಯ ದೊಡ್ಡಪ್ಪ ಹಾಸನದ ಸರ್ಕಾರಿ ಎಂಜಿನಿಯರಿಂಗ್ ಕಾಲೇಜಿನಲ್ಲಿ ಪ್ರಾಧ್ಯಾಪಕರಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಚಿಕ್ಕಪ್ಪ



ಕೊಪ್ಪಳ ಜಿಲ್ಲೆಯ ಕುಷ್ಟಗಿ ತಾಲೂಕಿನ ಕೊಡತಗೇರಿ ಗ್ರಾಮದಲ್ಲಿ ಕೃಷಿಕರಾಗಿದ್ದಾರೆ. ಕುಟುಂಬದ ಇಬ್ಬರು ದೊಡ್ಡಪ್ಪಂದಿರ ಮಕ್ಕಳೂ ಎಂಜಿನಿಯರ್‌ಗಳಾಗಿದ್ದು, ಅಣ್ಣ ಬೆಂಗಳೂರಿನ ಬಿಎಂಎಸ್ ಎಂಜಿನಿಯರಿಂಗ್ ಕಾಲೇಜಿನಲ್ಲಿ ಎಂಜಿನಿಯರಿಂಗ್ ವ್ಯಾಸಂಗ ಮಾಡುತ್ತಿದ್ದಾರೆ.
ಅಜ್ಜ-ಅಜ್ಜಿ ಕೊಡತಗೇರಿಯಲ್ಲಿ ವಾಸವಾಗಿದ್ದು, ಗುರುಕಿರಣ ಅವರದು ದೊಡ್ಡ ಅವಿಭಕ್ತ ಕುಟುಂಬವಾಗಿದೆ. ಕುಟುಂಬದ ಪ್ರೋತ್ಸಾಹ, ಶಿಕ್ಷಕರ ಮಾರ್ಗದರ್ಶನ ಹಾಗೂ ಸ್ವಂತ ಪರಿಶ್ರಮದಿಂದ ಮೊದಲ ಪ್ರಯತ್ನದಲ್ಲಿಯೇ ನೀಟ್‌ನಲ್ಲಿ ಯಶಸ್ಸು ಸಾಧಿಸಿ ವೈದ್ಯಕೀಯ ಶಿಕ್ಷಣಕ್ಕೆ ಆಯ್ಕೆಯಾಗಿರುವ ಗುರುಕಿರಣ ಅವರ ಸಾಧನೆಗೆ ಕುಟುಂಬಸ್ಥರು, ಶಿಕ್ಷಕರು ಹಾಗೂ ಗ್ರಾಮಸ್ಥರು ಅಭಿನಂದನೆ ಸಲ್ಲಿಸಿದ್ದಾರೆ.

## ಗದಗ ಜಿಲ್ಲೆಯಲ್ಲಿ ಇಂದು ಎಲ್ಲೆಲ್ಲಿ ಪ್ರಜಾಸೇವೆ ಆಂದೋಲನ ಸಭೆ

**ಸತ್ಯಮಿಥ್ಯ ಸುದ್ದಿಮೂಲ ಗದಗ :**
ಸಾರ್ವಜನಿಕರ ಕುಂದುಕೊರತೆಗಳನ್ನು ಆಲಿಸಲು ಮತ್ತು ಸರ್ಕಾರದ ಸೌಲಭ್ಯಗಳನ್ನು ತಲುಪಿಸಲು ಸೆಪ್ಟೆಂಬರ್ 19 ರ ಶನಿವಾರದಂದು ಬೆಳಿಗ್ಗೆ 10 ಗಂಟೆಗೆ ಗದಗ ಜಿಲ್ಲೆಯ ವಿವಿಧೆಡೆ ಈ ಕೆಳಗಿನಂತೆ ಪ್ರಜಾಸೇವೆ ಆಂದೋಲನ ಸಭೆಗಳನ್ನು ಹಮ್ಮಿಕೊಳ್ಳಲಾಗಿದೆ.
ಗದಗ ತಾಲೂಕಿನ ಅಸುಂಡಿ ಗ್ರಾಮದ ಕುವೆಂಪು ಶತಮಾನೋತ್ಸವ ಸರಕಾರಿ ಮಾದರಿಯ ಶಾಲೆಯಲ್ಲಿ , ಶಿರಹಟ್ಟಿ ತಾಲೂಕಿನ ಬನ್ನಿಕೊಪ್ಪ ಗ್ರಾಮ ಪಂಚಾಯತ್ ಕಾರ್ಯಾಲಯದಲ್ಲಿ , ನರಗುಂದ ತಾಲೂಕಿನ ಹುಣಸಿಕಟ್ಟಿ ಗ್ರಾಮ ಪಂಚಾಯತ್ ಕಾರ್ಯಾಲಯದಲ್ಲಿ, ರೋಣ ತಾಲೂಕಿನ ಹುಲ್ಲೂರ ಗ್ರಾಮ ಪಂಚಾಯತ್ ಕಾರ್ಯಾಲಯದಲ್ಲಿ, ಮುಂಡರಗಿ ತಾಲೂಕಿನ ಜಂತ್ಲಿ ಶಿರೂರ ಸಮುದಾಯ ಭವನದಲ್ಲಿ, ಗಜೇಂದ್ರಗಡ ತಾಲೂಕಿನ ಕುಂಟೋಜಿ ಗ್ರಾಮ ಪಂಚಾಯತ್ ಆವರಣದಲ್ಲಿ , ಲಕ್ಷ್ಮೇಶ್ವರ ತಾಲೂಕಿನ ಸೂರಣಗಿ ಗ್ರಾಮ ಪಂಚಾಯತ್ ಕಾರ್ಯಾಲಯದಲ್ಲಿ ಪ್ರಜಾಸೇವೆ ಆಂದೋಲನ ಸಭೆಗಳನ್ನು ಆಯೋಜಿಸಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.

# ಡೊಳ್ಳಿನ ನಾದಕ್ಕೆ ಹೆಜ್ಜೆ ಹಾಕಿದ ಗಣೇಶನ ಮೆರವಣಿಗೆ

## ನರೇಗಲ್ಲ ಪೊಲೀಸ್ ಠಾಣೆಯ ಗಣೇಶನಿಗೆ ಸಾಂಪ್ರದಾಯಿಕ ಬೀಳ್ಕೊಡುಗೆ

**ಸತ್ಯಮಿಥ್ಯ ಸುದ್ದಿಮೂಲ ನರೇಗಲ್ಲ :**
ಗಣೇಶ ಬಂದ್ರೆ ಊರೊಳಗ ಹಬ್ಬದ ಕಳೆ... ವಿಸರ್ಜನೆ ಅಂದ್ರೆ ಡೊಳ್ಳಿನ ನಾದ, ಜೈಕಾರದ ಸದ್ದು, ಭಕ್ತರ ಸಂಭ್ರಮ! ನರೇಗಲ್ಲ ಪೊಲೀಸ್ ಠಾಣೆಯ ಗಣೇಶನ ವಿಸರ್ಜನೆಯೂ ಅಂಥದ್ದೇ. ಡೊಳ್ಳು ಬಾರಿಸೋಕೆ ಶುರು ಮಾಡಿದ್ರು ಅಂದರೆ ಸಾಕು, ಗಣೇಶನ ಮೆರವಣಿಗೆಗೆ ಊರೇ ಹೆಜ್ಜೆ ಹಾಕಿದಂತಾಗಿತ್ತು! ಪೊಲೀಸ್ ಠಾಣೆಯಿಂದ ಗಣೇಶನ ಮೂರ್ತಿ ಹೊರಗ ಬಂದಾಗ ಮುಂದೆ ಡೊಳ್ಳಿನ ತಂಡ, ಹಿಂದೆ ಭಕ್ತರ ದಂಡು. 'ಗಣಪತಿ ಬಪ್ಪಾ ಮೋರಿಯಾ' ಎಂಬ ಜಯಘೋಷದ ನಡುವೆ ಮೆರವಣಿಗೆ ಸಾಗಿತು. ಡೊಳ್ಳಿನ ತಾಳಕ್ಕೆ ಯುವಕರು ಹೆಜ್ಜೆ ಹಾಕಿದ್ರೆ, ರಸ್ತೆಯ ಬದಿಯಲ್ಲಿ ನಿಂತಿದ್ದವರು ಗಣೇಶನ ದರ್ಶನ ಪಡೆದು ಕೈಮುಗಿದರು.



ಪೊಲೀಸ್ ಠಾಣೆಯಿಂದ ಹೊರಟ ಮೆರವಣಿಗೆ ಹಿರೇಮಠ ಶಾಲೆ, ಪಟ್ಟಣ ಪಂಚಾಯಿತಿ, ದುರ್ಗಾ ಸರ್ಕಲ್ ಮಾರ್ಗವಾಗಿ ಸಾಗಿ-ತು. ದಾರಿಯುದ್ದಕ್ಕೂ ಗಣೇಶನ ದರ್ಶನ ಪಡೆಯಲು ಜನ ಜಮಾಯಿಸಿದ್ರು. ಡೊಳ್ಳಿನ ಸದ್ದಿಗೆ ಪಟ್ಟಣದ ವಾತಾವರಣವೇ ಹಬ್ಬದ ಮೆರವಣಿಗೆಯಾಗಿ ಬದಲಾಯ್ತು. ಇತ್ತೀಚಿನ ದಿನಗಳಲ್ಲಿ ಡಿಜೆ ಸದ್ದಿನ ಅಬ್ಬರ ಹೆಚ್ಚಾಗ್ತಿರೋ ಹೊತ್ತಲ್ಲೇ, ಪೊಲೀಸ್ ಠಾಣೆಯ ಗಣೇಶನ ವಿಸರ್ಜನೆ ಮಾತ್ರ ನಮ್ಮೂರ ಸಾಂಪ್ರದಾಯಿಕ ಡೊಳ್ಳನ್ನೇ ಮುಂದಿಟ್ಟುಕೊಂಡು ನಡೆದದ್ದು ವಿಶೇಷ. ಡಿಜೆ ಇಲ್ಲ, ಅಬ್ಬರವಿಲ್ಲ... ಡೊಳ್ಳಿನ ನಾದ, ಭಕ್ತಿಯ ಭಾವನೆ, ಶಿಸ್ತಿನ ಹೆಜ್ಜೆಇದೇ ಮೆರವಣಿಗೆಯ ಸೊಗಡು!

ಕೊನೆಗೆ ಪಟ್ಟಣ ಪಂಚಾಯಿತಿ ಕಚೇ-ರಿಯ ಹಿಂದಿನ ಭಾಗದಲ್ಲಿರುವ ಕೆರೆಯಲ್ಲಿ ಗಣೇಶ ಮೂರ್ತಿಯ ವಿಸರ್ಜನೆ ಭಕ್ತಿಭಾವದಿಂದ ನೆರವೇರಿತು. ಗಣೇಶ ಬಂದಾಗ ಮನೆ-ಮನಸ್ಸಿಗೆ ಸಂತಸ ತುಂಬಿದಂತೆ, ಬೀಳ್ಕೊಡುವಾಗಲೂ ಊರಿನ ಸಂಪ್ರದಾಯದ ಸೊಗಡನ್ನೇ ಉಳಿಸಿಕೊಂಡು ಹೋಗಿದ್ದು ನರೇಗಲ್ಲ ಪೊಲೀಸ್ ಠಾಣೆ-ಯ ಗಣೇಶೋತ್ಸವದ ವಿಶೇಷತೆ. 'ಗಣೇಶ ಹೋದ... ಆದ್ರೆ ಡೊಳ್ಳಿನ ನಾದ, ಭಕ್ತರ ಸಂಭ್ರಮ ಮಾತ್ರ ಮನಸ್ಸಿನಲ್ಲಿ ಉಳೀತು!'

# ರಾಜಕೀಯ ಪಕ್ಷಗಳ ಪ್ರತಿನಿಧಿಗಳಿಗೆ ಮಾಹಿತಿ ಹಂಚಿಕೆ

**ಸತ್ಯಮಿಥ್ಯ ಸುದ್ದಿಮೂಲ ಗದಗ :**
ಗದಗ ಜಿಲ್ಲೆಯಲ್ಲಿ ಸೆಪ್ಟೆಂಬರ್ 19 ಮತ್ತು 20ರಂದು ನಡೆಯಲಿರುವ ಖಚಖ ಮತದಾರರ ನೋಂದಣಿ ಹಾಗೂ ಆಕ್ಷೇಪಣೆ ಸಲ್ಲಿಕೆಯ ವಿಶೇಷ ಅಭಿಯಾನದ ಹಿನ್ನೆಲೆಯಲ್ಲಿ ಜಿಲ್ಲಾಡಳಿತ ಭವನದಲ್ಲಿ ಶುಕ್ರವಾರ ರಾಜಕೀಯ ಪಕ್ಷಗಳ ಪ್ರತಿನಿಧಿಗಳ ಪೂರ್ವಭಾವಿ ಸಭೆ ನಡೆಯಿತು.



ಸಭೆಯ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಅವರು, ವಿಶೇಷ ಅಭಿಯಾನವನ್ನು ವ್ಯವಸ್ಥಿತವಾಗಿ ಹಾಗೂ ಪಾರದರ್ಶಕವಾಗಿ ನಡೆಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ಮತದಾರರ ನೋಂದಣಿ, ಮತದಾರರ ಪಟ್ಟಿಗೆ ಸಂಬಂಧಿಸಿದ ಆಕ್ಷೇಪಣೆಗಳು ಹಾಗೂ ಅಗತ್ಯ ತಿದ್ದುಪಡಿಗಳನ್ನು ನಿಯಮಾನುಸಾರ ಸ್ವೀಕರಿಸಿ, ಅರ್ಹ ಮತದಾರರಿಗೆ ಯಾವುದೇ ತೊಂದರೆ-ಯಾಗದಂತೆ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ತಿಳಿಸಿದರು.

SIR ವಿಶೇಷ ಅಭಿಯಾನದ ಕುರಿತು ರಾಜಕೀಯ ಪಕ್ಷಗಳ ಪ್ರತಿನಿಧಿಗಳಿಗೆ ಅಗತ್ಯ ಮಾಹಿತಿ ನೀಡಲಾಯಿತು. ಅಭಿಯಾನದ ಸಂದರ್ಭದಲ್ಲಿ ಮತದಾರರಿಗೆ ಸೂಕ್ತ ಮಾರ್ಗದರ್ಶನ ನೀಡುವ ಮೂಲಕ ಅರ್ಹ ಮತದಾರರ ಹೆಸರುಗಳು ಮತದಾರರ ಪಟ್ಟಿಯಲ್ಲಿ ಸೇರ್ಪಡೆಯಾಗುವಂತೆ ಹಾಗೂ ಯಾವುದೇ ಅರ್ಹ ಮತದಾರರು ಪಟ್ಟಿಯಿಂದ ಹೊರಗುಳಿಯದಂತೆ ಎಲ್ಲರೂ ಸಹಕರಿಸುವಂತೆ ಜಿಲ್ಲಾಧಿಕಾರಿ ಮನವಿ ಮಾಡಿದರು.

ಮತದಾರರ ನೋಂದಣಿ ಮತ್ತು ಆಕ್ಷೇಪಣೆ ಸಲ್ಲಿಕೆ ಪ್ರಕ್ರಿಯೆಯಲ್ಲಿ ಸಾರ್ವಜನಿಕರಿಗೆ ಅಗತ್ಯ ಮಾಹಿತಿ ಲಭ್ಯವಾಗುವಂತೆ ಸಂಬಂಧಿಸಿದ ಅಧಿಕಾರಿಗಳು ಕ್ರಮ ವಹಿಸಬೇಕು. ಅಭಿಯಾನದ ಉದ್ದೇಶವನ್ನು ಸಾರ್ವಜನಿಕರಿಗೆ ಪರಿಣಾಮಕಾರಿಯಾಗಿ ತಲುಪಿಸುವ ಮೂಲಕ ಹೆಚ್ಚಿನ ಸಂಖ್ಯೆಯಲ್ಲಿ ಅರ್ಹ ಮತದಾರರು ಇದರ ಸದುಪಯೋಗ ಪಡೆದುಕೊಳ್ಳುವಂತೆ ನೋಡಿಕೊಳ್ಳಬೇಕು ಎಂದು ಅವರು ಸೂಚಿಸಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್., ಉಪವಿಭಾಗಾಧಿಕಾರಿ ಗಂಗಪ್ಪ ಎಂ., ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕಿ ಡಾ. ನಂದಾ ಹಣ್ಣಬರಟ್ಟಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಉಪಸ್ಥಿತರಿದ್ದರು.

# ಧರ್ಮ ಎಂದರೆ ಕೇವಲ ಪೂಜೆಯಲ್ಲ, ಅದು ಜೀವನದ ಶಿಸ್ತು: ಮೋಹನ್ ಭಾಗವತ್ ಮಾತು

**ಸತ್ಯಮಿಥ್ಯ ನ್ಯೂಸ್ ಡೆಸ್ಕ್**
**ಉಜ್ಜಯಿನಿ/ನವದೆಹಲಿ:**
ಧರ್ಮ ಎಂಬುದು ಕೇವಲ ಪೂಜಾ ಪದ್ಧತಿ ಅಥವಾ ರಿಲಿಜನ್ ಮಾತ್ರವಲ್ಲ. ಅದು ಮನುಷ್ಯನ ಜೀವನದ ಶಿಸ್ತು, ಕರ್ತವ್ಯ ಮತ್ತು ದಿನನಿತ್ಯದ ಆಚರಣೆಯಾಗಿದೆ ಎಂದು ರಾಷ್ಟ್ರೀಯ ಸ್ವಯಂಸೇವಕ ಸಂಘದ ಸರಸಂಘಚಾಲಕ ಮೋಹನ್ ಭಾಗವತ್ ಪ್ರತಿಪಾದಿಸಿದ್ದಾರೆ.

ಮಧ್ಯಪ್ರದೇಶದ ಉಜ್ಜಯಿನಿಯಲ್ಲಿ ಆಯೋಜಿಸಲಾಗಿದ್ದ 6ನೇ ಆವೃತ್ತಿಯ 'ಯುವ ಧರ್ಮ ಸಂಸದ್' ಕಾರ್ಯಕ್ರಮದಲ್ಲಿ ದೇಶದ ವಿವಿಧ ಭಾಗಗಳಿಂದ ಆಗಮಿಸಿದ್ದ 1,700ಕ್ಕೂ ಹೆಚ್ಚು ಯುವಕರನ್ನು ಉದ್ದೇಶಿಸಿ ಅವರು ಮಾತನಾಡಿದರು.

**ಸಾರ್ವಜನಿಕ ಶಿಸ್ತು ಕೂಡ ಧರ್ಮ:** "ನಾವು ಆಹಾರ ಸೇವಿಸಿದ ನಂತರ ಎಲ್ಲಂದರಲ್ಲಿ ಕಸ ಹಾಕದಿರುವುದು, ಸಂಚಾರ (ಟ್ರಾಫಿಕ್) ನಿಯಮಗಳನ್ನು ಚಾಚೂತಪ್ಪದೆ ಪಾಲಿಸುವುದು ಕೂಡ ಧರ್ಮದ ಭಾಗವೇ ಆಗಿದೆ. ಧರ್ಮವು ಮನುಷ್ಯನನ್ನು ಕಟ್ಟುಪಾಡುಗಳಿಗೆ ಒಳಪಡಿಸುವುದಿಲ್ಲ, ಬದಲಿಗೆ ಸ್ವತಂತ್ರಗೊಳಿಸಿ



ಮೋಕ್ಷದತ್ತ ಕೊಂಡೊಯ್ಯುತ್ತದೆ" ಎಂದು ವಿವರಣೆ ನೀಡಿದರು.

**ನೆರೆರಾಷ್ಟ್ರದ ಕಿರಿಕಿರಿಯ ಬಗ್ಗೆ ಪ್ರಸ್ತಾಪ:**
ಪಾಕಿಸ್ತಾನದ ಹೆಸರು ಉಲ್ಲೇಖಿಸದೆ ಮಾತನಾಡಿದ ಅವರು, "ನಮ್ಮ ಪಶ್ಚಿಮದ ನೆರೆರಾಷ್ಟ್ರವು ವಿನಾಕಾರಣ ಭಾರತಕ್ಕೆ ಕಿರಿಕಿರಿ ಉಂಟುಮಾಡುತ್ತದೆ. ಹಲವು ಬಾರಿ ಅದಕ್ಕೆ ಸೂಕ್ತ ಬುದ್ಧಿ ಕಲಿಸಿದ್ದರೂ, ಭಾರತ ಎಂದಿಗೂ ಸೇಡಿನ ಮನೋಭಾವ ತಳೆದಿಲ್ಲ. ಸಂಕಷ್ಟದ ಸಮಯದಲ್ಲಿ ನೆರವಿಗೆ ಧಾವಿಸಿದೆ. ಏಕೆಂದರೆ ಭಾರತೀಯರ ಡಿಎನ್‌ಎಯಲ್ಲೇ ಧರ್ಮ ಮತ್ತು ಉದಾರತೆ ಇದೆ" ಎಂದರು.

**ಪರಿಸರ ಕಾಳಜಿ:** ಅಧರ್ಮದ ನಡವಳಿಕೆಯಿಂದಾಗಿ ಇಂದಿನ ಜಗತ್ತಿನಲ್ಲಿ ಅರಣ್ಯನಾಶ ಹಾಗೂ ಪರಿಸರ ಸಮತೋಲನ ತಪ್ಪುತ್ತಿದ್ದು, ಇದು ಮಾನವಕುಲದ ಅಸ್ತಿತ್ವಕ್ಕೇ ಕಂಟಕವಾಗಿದೆ ಎಂದು ಕಳವಳ ವ್ಯಕ್ತಪಡಿಸಿದರು.

**ಜಾಗತಿಕ ವೇದಿಕೆಯಲ್ಲಿ 'ವಸುಧೈವ ಕುಟುಂಬಕಂ' ಸಂದೇಶ:** ಆರ್‌ಎಸ್‌ಎಸ್ ಶತಮಾನೋತ್ಸವದ ಅಂಗವಾಗಿ ಮೋಹನ್ ಭಾಗವತ್ ಅವರು ಇತ್ತೀಚೆಗೆ ಅಮೆರಿಕದ ನ್ಯೂಯಾರ್ಕ್, ಕೆನಡಾದ ಟೊರೊಂಟೊ ಹಾಗೂ ಬ್ರಿಟನ್‌ನ ಲಂಡನ್ ಸೇರಿದಂತೆ ವಿವಿಧ ನಗರಗಳಿಗೆ ಪ್ರವಾಸ ಕೈಗೊಂಡಿ-ದ್ದರು. ಅಂತರರಾಷ್ಟ್ರೀಯ ಸಂವಾದಗಳಲ್ಲಿ ಮಾತನಾಡಿದ್ದ ಅವರು, ಭಾರತವು ಜಗತ್ತನ್ನು ಆಳುವ "ಮಹಾಶಕ್ತಿ" ಆಗುವ ಬದಲು ಪ್ರೀತಿ ಮತ್ತು ಜ್ಞಾನವನ್ನು ಹಂಚುವ "ವಿಶ್ವಗುರು" ಆಗಬೇಕು ಎಂಬ ಆಶಯ ವ್ಯಕ್ತಪಡಿಸಿದ್ದರು. "ಹಿಂದೂ ರಾಷ್ಟ್ರದ ಪರಿಕಲ್ಪನೆಯು ಪ್ರತಿಯೊಬ್ಬರನ್ನೂ ಒಳಗೊಳ್ಳುವಂತಹದ್ದು ಹಾಗೂ 'ವಸುಧೈವ ಕುಟುಂಬಕಂ' (ಇಡೀ ಜಗತ್ತೇ ಒಂದು ಕುಟುಂಬ) ಎಂಬ ತತ್ವದ ಮೇಲೆ ಆಧಾರಿತವಾಗಿದೆ" ಎಂದು ಅವರು ಜಾಗತಿಕ ವೇದಿಕೆಗಳಲ್ಲಿ ಸ್ಪಷ್ಟಪಡಿಸಿದ್ದರು.

# ಆರೋಗ್ಯವಂತ ವಿದ್ಯಾರ್ಥಿಗಳೇ ದೇಶದ ಭವಿಷ್ಯದ ಶಕ್ತಿ: ಪಾರ್ಶ್ವನಾಥ ಉಪಾಧ್ಯೆ

**ಸತ್ಯಮಿಥ್ಯ ಸುದ್ದಿಮೂಲ ಬಾಗಲಕೋಟೆ:**
ವಿದ್ಯಾರ್ಥಿಗಳು ವಿದ್ಯಾಭ್ಯಾಸದ ಜೊತೆಗೆ ತಮ್ಮ ಆರೋಗ್ಯದ ಬಗ್ಗೆಯೂ ಕಾಳಜಿ ವಹಿಸಬೇಕು. ಆರೋಗ್ಯಕರ ದೇಹ ಮತ್ತು ಉತ್ತಮ ಮನಸ್ಥಿತಿ ಹೊಂದಿದ್ದಾಗ ಮಾತ್ರ ಜೀವನದಲ್ಲಿ ಸಾಧನೆ ಮಾಡಲು ಸಾಧ್ಯ. ಆದ್ದರಿಂದ ಚಿಕ್ಕ ವಯಸ್ಸಿನಿಂದಲೇ ಉತ್ತಮ ಆರೋಗ್ಯ ಪದ್ಧತಿಗಳನ್ನು ರೂಢಿಸಿಕೊಳ್ಳಬೇಕು ಎಂದು ಪಾರ್ಶ್ವನಾಥ ಉಪಾಧ್ಯೆ ಹೇಳಿದರು.

ಜಮಖಂಡಿ ತಾಲೂಕಿನ ಸಾವಳಗಿ ನಗರದ ಎಸ್.ಡಿ.ಎಸ್.ಜಿ. ಪಿಯು ಕಾಲೇಜು ಮಹಾವಿದ್ಯಾಲಯದಲ್ಲಿ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮೀಣಾಭಿವೃದ್ಧಿ ಯೋಜನೆ (ರಿ.), ಜಮಖಂಡಿ ವತಿಯಿಂದ ವಿದ್ಯಾರ್ಥಿಗಳಲ್ಲಿ ಆರೋಗ್ಯದ ಕುರಿತು ಜಾಗೃತಿ ಮೂಡಿಸುವ ಉದ್ದೇಶದಿಂದ 'ಸ್ವಾಸ್ಥ್ಯ ಸಂಕಲ್ಪ' ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು, ಇಂದಿನ ಯುವಜನತೆ ಆರೋಗ್ಯದ ಬಗ್ಗೆ ಹೆಚ್ಚಿನ ಜಾಗೃತಿ ಹೊಂದಬೇಕಿದೆ. ಪೌಷ್ಟಿಕ ಆಹಾರ ಸೇವನೆ, ವೈಯಕ್ತಿಕ ಸ್ವಚ್ಛತೆ, ನಿಯಮಿತ ವ್ಯಾಯಾಮ, ಸಮಯಪಾಲನೆ ಹಾಗೂ ಉತ್ತಮ ಹವ್ಯಾಸಗಳನ್ನು ಜೀವನದ ಭಾಗವಾಗಿಸಿಕೊಳ್ಳಬೇಕು. ಆರೋಗ್ಯಕ್ಕೆ ಹಾನಿಕಾರಕವಾದ ದುಶ್ಚಟಗಳಿಂದ ದೂರವಿದ್ದು, ಸಮಾಜಕ್ಕೆ ಉಪಯುಕ್ತವಾದ ನಾಗರಿಕರಾಗಿ ರೂಪುಗೊಳ್ಳಬೇಕು ಎಂದು ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ಕಾರ್ಯಕ್ರಮವು ವಿದ್ಯಾರ್ಥಿಗಳಲ್ಲಿ ಆರೋಗ್ಯದ ಮಹತ್ವದ ಕುರಿತು ಅರಿವು ಮೂಡಿಸುವುದರೊಂದಿಗೆ, ಆರೋಗ್ಯಕರ ಜೀವನ ನಡೆಸುವ ಸಂಕಲ್ಪಕ್ಕೆ ಪ್ರೇರಣೆ ನೀಡಿತು.

'ಸ್ವಾಸ್ಥ್ಯ ಸಂಕಲ್ಪ' ಕಾರ್ಯಕ್ರಮದ ಮೂಲಕ ವಿದ್ಯಾರ್ಥಿಗಳಿಗೆ ಆರೋಗ್ಯಕರ ಜೀವನಶೈಲಿಯ ಮಹತ್ವವನ್ನು ತಿಳಿಸುವ ಜೊತೆಗೆ, ಸ್ವಚ್ಛತೆ, ಉತ್ತಮ ಆಹಾರ ಪದ್ಧತಿ, ದೈಹಿಕ ಹಾಗೂ ಮಾನಸಿಕ ಆರೋಗ್ಯದ ಕುರಿತು ಜಾಗೃತಿ ಮೂಡಿಸಲಾಯಿತು. ಆರೋಗ್ಯದ ಬಗ್ಗೆ ನಿರ್ಲಕ್ಷ್ಯ ವಹಿಸದೆ, ಪ್ರತಿಯೊಬ್ಬರೂ ತಮ್ಮ ಆರೋಗ್ಯದ ಜವಾಬ್ದಾರಿಯನ್ನು ತಾವೇ ವಹಿಸಿಕೊಳ್ಳಬೇಕು ಎಂಬ ಸಂದೇಶವನ್ನು ನೀಡಲಾಯಿತು.

ಕಾರ್ಯಕ್ರಮದಲ್ಲಿ ಶಾಲೆಯ ಮುಖ್ಯ ಗುರುಗಳಾದ ಎಂ.ಕೆ. ತಂಬೂರಿ, ವಲಯದ ಮೇಲ್ವಿಚಾರಕರಾದ ಜಯಶ್ರೀ, ಸೇವಾ ಪ್ರತಿನಿಧಿ ಶ್ರೀಮತಿ ಅನಿತಾ ಜಾಧವ್, ಶಾಲೆಯ ಶಿಕ್ಷಕ ವೃಂದ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.




# ದಸರಾ ಕ್ರೀಡಾಕೂಟದಲ್ಲಿ ಯುವಕರು ಉತ್ಸಾಹದಿಂದ ಪಾಲ್ಗೊಳ್ಳಲಿ: ಅಸೂಟಿ

**ಸತ್ಯಮಿಥ್ಯ ಸುದ್ದಿಮೂಲ ಗದಗ :**
ದಸರಾ ಕ್ರೀಡಾಕೂಟದಲ್ಲಿ ಯುವಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಕ್ರೀಡಾಸಕ್ತಿಯನ್ನು ಬೆಳೆಸಿಕೊಳ್ಳಬೇಕು. ಕ್ರೀಡೆಯಿಂದ ದೈಹಿಕ ಹಾಗೂ ಮಾನಸಿಕ ಆರೋಗ್ಯ ಸುಧಾರಿಸುವುದರ ಜೊತೆಗೆ ಆತ್ಮವಿಶ್ವಾಸ, ಶಿಸ್ತು ಮತ್ತು ತಂಡದ ಮನೋಭಾವ ಬೆಳೆಸಿಕೊಳ್ಳಲು ಸಾಧ್ಯವಾಗುತ್ತದೆ ಎಂದು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾಧ್ಯಕ್ಷ ಬಿ.ಬಿ. ಅಸೂಟಿ ಹೇಳಿದರು.

ಗದಗ ತಾಲೂಕು ಆಡಳಿತ, ತಾಲೂಕು ಪಂಚಾಯತ್ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಇವರ ಸಂಯುಕ್ತ ಆಶ್ರಯದಲ್ಲಿ ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಆಯೋಜಿಸಿರುವ ಗದಗ ತಾಲೂಕು ಮಟ್ಟದ ದಸರಾ ಕ್ರೀಡಾಕೂಟಕ್ಕೆ ಶುಕ್ರವಾರ ಚಾಲನೆ ನೀಡಿ ಅವರು ಮಾತನಾಡಿದರು.

ಕ್ರೀಡೆಯಲ್ಲಿ ಸೋಲು-ಗೆಲುವು ಮುಖ್ಯವಲ್ಲ. ಕ್ರೀಡಾ ಸ್ಫೂರ್ತಿಯಿಂದ ಹಾಗೂ ಹುಮ್ಮಸ್ಸಿನಿಂದ ಭಾಗವಹಿಸುವುದು ಅತ್ಯಂತ ಮುಖ್ಯ. ಪ್ರತಿಯೊಬ್ಬರೂ ಕ್ರೀಡೆಯ ಮಹತ್ವ ಹಾಗೂ ಅದರಿಂದ ದೊರೆಯುವ ಪ್ರಯೋಜನಗಳನ್ನು ಅರಿತು, ತಮ್ಮ ದೈನಂದಿನ ಜೀವನದಲ್ಲಿ ಯಾವುದಾದರೊಂದು ಕ್ರೀಡೆಯಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳುವ ಅಭ್ಯಾಸ ಬೆಳೆಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ದಸರಾ ಹಬ್ಬದ ಅಂಗವಾಗಿ ಕ್ರೀಡಾಕೂಟವನ್ನು ಆಯೋಜಿಸಲಾಗುತ್ತಿದ್ದು, ಹಬ್ಬದ ಸಂಭ್ರಮ, ಉತ್ಸಾಹ ಮತ್ತು ಸೌಹಾರ್ದತೆಯ ವಾತಾವರಣ ಕ್ರೀಡಾಕೂಟದಲ್ಲಿಯೂ ಮೂಡಿಬರಬೇಕು. ಕ್ರೀಡಾಪಟುಗಳು ಕ್ರೀಡಾ ಸ್ಫೂರ್ತಿಯಿಂದ ಸ್ಪರ್ಧೆಗಳಲ್ಲಿ ಪಾಲ್ಗೊಂಡು ಕ್ರೀಡಾಕೂಟವನ್ನು ಯಶಸ್ವಿಗೊಳಿಸಬೇಕು ಎಂದರು.

ಗದಗ ತಾಲೂಕಿನ ಕ್ರೀಡಾಪಟುಗಳು ತಾಲೂಕು ಹಾಗೂ ಜಿಲ್ಲಾ ಮಟ್ಟದಲ್ಲಿ ಉತ್ತಮ ಸಾಧನೆ ಮಾಡುವುದರೊಂದಿಗೆ ರಾಜ್ಯಮಟ್ಟದ ದಸರಾ ಕ್ರೀಡಾಕೂಟಗಳಲ್ಲಿಯೂ ಪಾಲ್ಗೊಂಡು ತಮ್ಮ ಪ್ರತಿಭೆಯನ್ನು ಪ್ರದರ್ಶಿಸಬೇಕು. ರಾಜ್ಯಮಟ್ಟದಲ್ಲಿ ಸಾಧನೆಗೈದು ಗದಗ ಜಿಲ್ಲೆ ಹಾಗೂ ತಾಲೂಕಿಗೆ ಕೀರ್ತಿ ತರಬೇಕು ಎಂದು ಬಿ.ಬಿ. ಅಸೂಟಿ ಆಶಿಸಿದರು.

ಸೆಪ್ಟೆಂಬರ್ 18 ಮತ್ತು 19ರಂದು ನಡೆಯಲಿರುವ ಕ್ರೀಡಾಕೂಟದಲ್ಲಿ ತಾಲೂಕಿನ ವಿವಿಧ ಭಾಗಗಳಿಂದ ಕ್ರೀಡಾಪಟುಗಳು ಭಾಗವಹಿಸುತ್ತಿದ್ದು, ವಿವಿಧ ಕ್ರೀಡಾ ಸ್ಪರ್ಧೆಗಳು ನಡೆಯಲಿವೆ.

ಕಾರ್ಯಕ್ರಮದಲ್ಲಿ ತಾಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ್ ಮಂದಾಲಿ, ರಾಷ್ಟ್ರ ಪ್ರಶಸ್ತಿ ಪುರಸ್ಕೃತ ನಿವೃತ್ತ ಶಿಕ್ಷಕ ಎಸ್.ಎನ್. ಬಳ್ಳಾರಿ, ಯುವ ಸಬಲೀಕರಣ ಹಾಗೂ ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಶರಣು ಗೋಗೇರಿ ಸೇರಿದಂತೆ ಅಧಿಕಾರಿಗಳು, ಕ್ರೀಡಾಪಟುಗಳು ಹಾಗೂ ಕ್ರೀಡಾಭಿಮಾನಿಗಳು ಉಪಸ್ಥಿತರಿದ್ದರು.




# ಕೊಪ್ಪಳ ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟಕ್ಕೆ ಅದ್ದೂರಿ ಚಾಲನೆ

**ಸತ್ಯಮಿಥ್ಯ ಸುದ್ದಿಮೂಲ ಕೊಪ್ಪಳ :**
ಕೊಪ್ಪಳ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಂಯುಕ್ತಾಶ್ರಯದಲ್ಲಿ 2026-27ನೇ ಸಾಲಿನ ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟವನ್ನು ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಶುಕ್ರವಾರ (ಸೆ. 18ರಂದು) ಅತ್ಯಂತ ಯಶಸ್ವಿಯಾಗಿ ಆಯೋಜಿಸಲಾಯಿತು.

ಕೊಪ್ಪಳ ವಿಧಾನಸಭಾ ಕ್ಷೇತ್ರದ ಶಾಸಕರಾದ ಕೆ.ರಾಘವೇಂದ್ರ ಹಿಟ್ನಾಳ್ ಅವರು ಕ್ರೀಡಾ ಜ್ಯೋತಿ ಬೆಳಗಿಸುವ ಮೂಲಕ ಈ ಕ್ರೀಡಾಕೂಟಕ್ಕೆ ಅಧಿಕೃತ ಚಾಲನೆ ನೀಡಿದರು.

ಕಾರ್ಯಕ್ರಮದಲ್ಲಿ ಕೊಪ್ಪಳ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಪ್ರಸನ್ನ ಗಡಾದ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ರೆಡ್ಡಿ ಶ್ರೀನಿವಾಸ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ವಿಠಲ್ ಜಾಬಗೌಡರ್, ಜಿಲ್ಲಾ ದೈಹಿಕ ಶಿಕ್ಷಣ ಪರಿವೀಕ್ಷಕರಾದ ಬಸವರಾಜ್ ಸೇರಿದಂತೆ ಹಲವು ಗಣ್ಯರು, ಜಿಲ್ಲೆಯ ಎಲ್ಲಾ ತಾಲೂಕುಗಳ ಕ್ರೀಡಾಕೂಟ ಆಯೋಜಕರು, ಇಲಾಖೆಯ ಸಿಬ್ಬಂದಿ ವರ್ಗ ಹಾಗೂ ದೈಹಿಕ ಶಿಕ್ಷಕರು ಭಾಗವಹಿಸಿದ್ದರು.

ದೈಹಿಕ ಶಿಕ್ಷಕರಾದ ಬಸವರಾಜ ಹನುಮಸಾಗರ ಅವರು ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ನಿರೂಪಿಸಿದರು.

2000ಕ್ಕೂ ಹೆಚ್ಚು ಕ್ರೀಡಾಪಟುಗಳ ಸಮಾಗಮ: ತಾಲೂಕು ಮಟ್ಟದ ದಸರಾ ಕ್ರೀಡಾಕೂಟಗಳಲ್ಲಿ ವೈಯಕ್ತಿಕ ಸ್ಪರ್ಧೆಗಳಲ್ಲಿ ಪ್ರಥಮ ಹಾಗೂ ದ್ವಿತೀಯ ಸ್ಥಾನ ಮತ್ತು ಗುಂಪು ಸ್ಪರ್ಧೆಗಳಲ್ಲಿ ಪ್ರಥಮ ಸ್ಥಾನ ಪಡೆದ ಸುಮಾರು 2,000ಕ್ಕೂ ಅಧಿಕ ಪುರುಷ ಮತ್ತು ಮಹಿಳಾ ಕ್ರೀಡಾಪಟುಗಳು ಈ ಜಿಲ್ಲಾ ಮಟ್ಟದ ಸ್ಪರ್ಧೆಯಲ್ಲಿ ಉತ್ಸಾಹದಿಂದ ಪಾಲ್ಗೊಂಡಿದ್ದರು.

ವಿವಿಧ ಕ್ರೀಡಾ ಸ್ಪರ್ಧೆಗಳು: ಈ ಕ್ರೀಡಾಕೂಟದಲ್ಲಿ ಪುರುಷ ಮತ್ತು ಮಹಿಳೆಯರಿಗಾಗಿ ವಿವಿಧ ಅಥ್ಲೆಟಿಕ್ಸ್ ಹಾಗೂ ಗುಂಪು ಆಟಗಳನ್ನು ಆಯೋಜಿಸಲಾಗಿತ್ತು. ಅಥ್ಲೆಟಿಕ್ಸ್ (ವೈಯಕ್ತಿಕ) ಸ್ಪರ್ಧೆಗಳಲ್ಲಿ 100, 200, 400, 800, 1500 ಮೀಟರ್ ಓಟಗಳು, ಪುರುಷರಿಗೆ 5000 ಹಾಗೂ 10000 ಮೀಟರ್ ಓಟ ಮತ್ತು ಮಹಿಳೆಯರಿಗೆ 3000 ಮೀಟರ್ ಓಟದ ಸ್ಪರ್ಧೆಗಳು ನಡೆದವು. ಇದರೊಂದಿಗೆ ಉದ್ದ ಜಿಗಿತ, ಎತ್ತರ ಜಿಗಿತ, ಟ್ರಿಪಲ್ ಜಂಪ್, ಗುಂಡು ಎಸೆತ, ಜಾವೆಲಿನ್ ಥ್ರೋ, ಡಿಸ್ಕಸ್ ಥ್ರೋ, ಹರ್ಡಲ್ಸ್ ಹಾಗೂ 4ಥ100 ಮತ್ತು 4ಥ400 ಮೀಟರ್ ರಿಲೇ ಸ್ಪರ್ಧೆಗಳು ಜರುಗಿದವು.

ಗುಂಪು ಸ್ಪರ್ಧೆಗಳಲ್ಲಿ ವಾಲಿಬಾಲ್, ಖೋ-ಖೋ, ಕಬಡ್ಡಿ, ಬ್ಯಾಸ್ಕೆಟ್‌ಬಾಲ್, ಕುಸ್ತಿ, ಥ್ರೋಬಾಲ್, ಯೋಗಾಸನ, ಬ್ಯಾಡ್ಮಿಂಟನ್ (ಷಟಲ್), ಹಾಕಿ, ಹ್ಯಾಂಡ್‌ಬಾಲ್ ಹಾಗೂ ಟೇಬಲ್ ಟೆನ್ನಿಸ್ ಪಂದ್ಯಾವಳಿಗಳು ಕ್ರೀಡಾಭಿಮಾನಿಗಳ ಗಮನ ಸೆಳೆದವು.



ಸತ್ಯಮಿಥ್ಯ
ನಿಮ್ಮ ಪ್ರತಿಬಿಂಬ ಕನ್ನಡ ದಿನ ಪತ್ರಿಕೆ
SATY MITHI
Kannada Daily Morning

# ಬೆಟಗೇರಿಯಲ್ಲಿ 42ನೇ ಸತ್ಸಂಗ ಸಮ್ಮೇಳನ ಸಂಪನ್ನ

**ಸತ್ಯಮಿಥ್ಯ ಸುದ್ದಿಮೂಲ ಬೆಟಗೇರಿ:**
ಗೋಕಾಕ ತಾಲೂಕಿನ ಬೆಟಗೇರಿ ಗ್ರಾಮದ ಈಶ್ವರ ದೇವರದೇವಸ್ಥಾನದಲ್ಲಿ42ನೇಸತ್ಸಂಗಸಮ್ಮೇಳನ ಇದೇ ಸೆ.12ರಿಂದ ಸೆ.16ರತನಕ ನಡೆದು, ಇಲ್ಲಿಯ ಈಶ್ವರ ದೇವರ ದೇವಸ್ಥಾನದಲ್ಲಿರುವ ಈಶ್ವರ ದೇವರ ಗದ್ದುಗೆ ಐದು ದಿನ ಮುಂಜಾನೆ 6 ಗಂಟೆಗೆ ಮಹಾಪೂಜೆ, ನೈವೇದ್ಯ ಸಮರ್ಪನೆ ಜರುಗಿತು.

ಸೆ.12 ರಿಂದ ಸೆ.16ರವರೆಗೆ ನಾಡಿನ ಹೆಸರಾಂತ ಮಹಾತ್ಮರು, ಮಹಾಸ್ವಾಮೀಜಿ, ಸಂತ, ಶರಣ–ರು, ಹರ, ಗುರು, ಚರಮೂರ್ತಿಗಳಿಂದ ವಿವಿಧ ವಿಷಯಗಳ ಮೇಲೆ ಪ್ರವಚನ ನಡೆಯಿತು.

ಸೆ.15ರಂದುಪ್ರಾತ:ಕಾಲಬ್ರಾಹ್ಮೀಮೂಹೂರ್ತದಲ್ಲಿ ಶಿವನಾಮಸ್ಮರಣೆಬಳಿಕರಾತ್ರಿ8ಗಂಟೆಗೆಇಂಚಲದ ಸಾಧು ಸಂಸ್ಥಾನಮಠದ ಸದ್ಗುರು ಡಾ.ಶಿವಾನಂದ ಭಾರತಿ ಮಹಾಸ್ವಾಮಿಜಿ ಘನ ಅಧ್ಯಕ್ಷತೆಯಲ್ಲಿ ಪ್ರವಚನ ನಡೆದ ಬಳಿಕ ಕರಿಕಟ್ಟಿ ಗುರುನಾಥ ಶಾಸ್ತ್ರೀಗಳಿಂದ ಕೀರ್ತನೆ, ಸ್ಥಳೀಯ ಶರಣ ಅಡಿವೆಪ್ಪ ಜೋಗಿ ಹಾಗೂ ಕುಟುಂಬದವರಿಂದ ಮತ್ತು ಅಕ್ಕಿಸಾಗರದ ಮಲ್ಲಪ್ಪ ತಡಸಿ ಹಾಗೂ ಕುಟುಂಬದವರಿಂದ ಡಾ. ಶಿವಾನಂದ ಭಾರತಿ ಶ್ರೀಗಳಿಗೆ ಭಕ್ತಿಯ ತುಲಾಭಾರ ಸೇವೆ, ಕಿರೀಟ ಮಹಾಪೂಜೆ ಸಡಗರದಿಂದ ಜರುಗಿತು.

ಸ್ಥಳೀಯಹಾಗೂಸುತ್ತಮುತ್ತಲಿನಹಳ್ಳಿಗಳಸದ್ಭಕ್ತ–ರಿಂದ ರಾತ್ರಿ ಶಿವ ಭಜನೆ, ಶಿವಜಾಗರಣೆ, ಕಲ್ಲೋಳಿ ಕುಮಾರಿ ವೀಣಾ ಮಂಟೂರ ಹಾಗೂ ಸಂಗಡಿಗ–ರಿಂದಸಂಗೀತಸೇವೆ,ಶರಣಯಲ್ಲಪ್ಪಮೇಳೆನ್ನವರ ಹಾಗೂ ಗ್ರಾಪಂ ಮಾಜಿ ಅಧ್ಯಕ್ಷ ಈಶ್ವರ ಬಳಿಗಾರ ಕುಟುಂಬದವರಿಂದ ಮಹಾಪ್ರಸಾದ ಸೇವೆ, ಸಾಧಕರಿಗೆ, ದಾನಿಗಳಿಗೆ ಸತ್ಕಾರ, ಆಶೀರ್ವಾದ, ಶ್ರೀಗಳಿಂದ ಆಶೀರ್ವಚನ, ಮಹಾಮಂಗಲ, ಮಹಾಪ್ರಸಾದ ಕಾರ್ಯಕ್ರಮ ಜರುಗಿ ಸತ್ಸಂಗ ಸಮ್ಮೇಳನ ಸಮಾರೊಪಗೊಂಡಿತು.



ಸೆ.16 ರಂದು ಸತ್ಸಂಗ ಸಮ್ಮೇಳನ ಸಮಾರೂಪ ಸಮಾರಂಭದ ಸಾನಿಧ್ಯವನ್ನು ಗದಗ ಮಹಿಳಾ ಆಧ್ಯಾತ್ಮ ವಿದ್ಯಾಶ್ರಮದ ಡಾ. ನೀಲಮ್ಮಾತಾಯಿ(ಅಸುಂಡಿ)ವಹಿಸಿ ಆರ್ಶೀವಚನ ನೀಡಿದರು. ಮಲ್ಲಾಪೂರ(ಕೆ.ಎನ್)ದ ಚಿದಾನಂದ ಸ್ವಾಮಿಜಿ, ಸುಣಧೋಳಿಯ ಅಭಿನವ ಶಿವಾನಂದ ಸ್ವಾಮಿಜಿ, ಜೋಡಕುರುಳಿ ಚಿದ್ಘನಾನಂದ ಭಾರತಿ ಸ್ವಾಮೀಜಿ, ಗದಗದ ಶರಣೆ ಮೈತ್ರಾ ತಾಯಿಯವರು ಸಮಾರೂಪ ಸಮಾರಂಭದ ಸಮ್ಮುಖ ವಹಿಸಿ ಪ್ರವಚನ ನೀಡಿದರು. ಕರಿಕಟ್ಟಿ ಗುರುನಾಥ ಶಾಸ್ತ್ರೀಗಳಿಂದ ಕೀರ್ತನೆ ಜರುಗಿತು.

ಚಿಂತಪ್ಪ ಸಿದ್ನಾಳ, ಮಹಾದೇವಪ್ಪ ಹಡಪದ, ಈರಪ್ಪ ದೇಯಣ್ಣವರ, ಈಡಪ್ಪ ರಾಮಗೇರಿ, ಗೌಡಪ್ಪ ಮೇಳೆಣ್ಣವರ, ಬಸಪ್ಪ ತೋಟಗಿ, ನಿಂಗಪ್ಪ ಕಂಬಿ, ಸಿದ್ರಾಮ ಪಡಶೆಟ್ಟಿ, ಫಕೀರಪ್ಪ ಪೇದನ್ನವರ, ಬಸವರಾಜ ನೀಲಣ್ಣವರ, ಈರಪ್ಪ ಮಾಡಲಗಿ, ಶಿವನಗೌಡ ದೇಯಣ್ಣವರ, ಬಸನಗೌಡ ದೇಯಣ್ಣವರ,ಭೀಮನಾಯ್ಕನಾಯ್ಕರ,ಸ್ಥಳೀಯ ಹಾಗೂಸುತ್ತಮುತ್ತಲಿನಹಳ್ಳಿಗಳಸಂತ–ಶರಣರು, ಹರ, ಗುರು, ಚರಮೂರ್ತಿಗಳು, ಗಣ್ಯರು, ಆಧ್ಯಾತ್ಮ ಪ್ರವಚನ ಶ್ರವಣಾಸಕ್ತರು,ಸ್ಥಳೀಯ ಈಶ್ವರ ಭಜನಾ ಮಂಡಳಿ ಪದಾಧಿಕಾರಿಗಳು, ಸದಸ್ಯರು, ಗ್ರಾಮಸ್ಥರು, ಮತ್ತೀತರರು ಇದ್ದರು. ಬಸವರಾಜ ಪಣದಿ ಕಾರ್ಯಕ್ರಮ ರೂಪಿಸಿ ಕೊನೆಗೆ ವಂದಿಸಿದರು.

# ಟಿಎಂಸಿ ಹೆಸರು, ಚಿಹ್ನೆ ಸ್ಥಗಿತ: ಕೇಂದ್ರ ಸರ್ಕಾರ, ಚುನಾವಣಾ ಆಯೋಗದ ವಿರುದ್ಧ ರಾಹುಲ್ ವಾಗ್ದಾಳಿ

**ನವದೆಹಲಿ:** ತೃಣಮೂಲ ಕಾಂಗ್ರೆಸ್ (ಟಿಎಂಸಿ) ಪಕ್ಷದ ಹೆಸರು ಮತ್ತು ಅದರ ಅಧಿಕೃತ ಚಿಹ್ನೆಯನ್ನು ತಾತ್ಕಾಲಿಕವಾಗಿ ಮುಟ್ಟುಗೋಲು ಹಾಕಿರುವುದಕ್ಕೆ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರು ಕೇಂದ್ರ ಸರ್ಕಾರ ಹಾಗೂ ಚುನಾವಣಾ ಆಯೋಗದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ್ದಾರೆ.

ಚುನಾವಣಾಆಯೋಗವುಜನರಜನಾದೇಶವನ್ನುರಕ್ಷಿಸುವತನ್ನ ಸಾಂವಿಧಾನಿಕ ಕರ್ತವ್ಯವನ್ನು ನಿರ್ವಹಿಸುವಲ್ಲಿ ವಿಫಲವಾಗಿದೆ. ಅಲ್ಲದೆ, ಚುನಾವಣಾ ಫಲಿತಾಂಶಗಳನ್ನು ಬುಡಮೇಲು ಮಾಡಲು ಪ್ರಯತ್ನಿಸುತ್ತಿರುವ ಶಕ್ತಿಗಳಿಗೆ ನೆರವಾಗುತ್ತಿದೆ ಎಂದು ರಾಹುಲ್ ಗಾಂಧಿ ಆರೋಪಿಸಿದ್ದಾರೆ.

ಈ ಕುರಿತು ಸಾಮಾಜಿಕ ಜಾಲತಾಣ 'ಎಕ್ಸ್'ನಲ್ಲಿ ಪೋಸ್ಟ್ ಮಾಡಿರುವ ಅವರು, "ಮೊದಲು ಶಿವಸೇನೆ, ನಂತರ ಎನ್‌ಸಿಪಿ, ಈಗ ತೃಣಮೂಲ ಕಾಂಗ್ರೆಸ್. ಪ್ರತಿಬಾರಿಯೂ ಒಂದೇ ಮಾದರಿ □ ಬಿಜೆಪಿ ಮತ್ತು ಚುನಾವಣಾ ಆಯೋಗ ಒಟ್ಟಾಗಿ ಪಕ್ಷವನ್ನು ವಿಭಜಿಸುತ್ತವೆ. ಬಳಿಕ ಅದರ ಚುನಾವಣಾ ಚಿಹ್ನೆಯನ್ನು ಕಸಿದುಕೊಳ್ಳಲಾಗುತ್ತದೆ" ಎಂದು ಕಿಡಿಕಾರಿದ್ದಾರೆ.

"ಒಂದು ಸಂಪೂರ್ಣ ರಾಜಕೀಯ ಪಕ್ಷವನ್ನೇ 'ಕದ್ದುಕೊಳ್ಳಲು' ಸಾಧ್ಯವಾದರೆ, ಕೋಟ್ಯಂತರ ಭಾರತೀಯರ ಮತಗಳನ್ನೂ 'ಕದಿಯಬಹುದು' ಎಂಬುದರಲ್ಲಿ ಅಚ್ಚರಿಯೇನಿಲ್ಲ. ಮತ ಕಳ್ಳತನ, ಸರ್ಕಾರ ಕಳ್ಳತನ, ಈಗ ಪಕ್ಷ ಕಳ್ಳತನ □ ಇವು ನಮ್ಮ ಪ್ರಜಾಪ್ರಭುತ್ವದ ಅವನತಿಯ ಸಂಕೇತಗಳಾಗಿವೆ. ಚುನಾವಣಾ ಆಯೋಗದ ಸಾಂವಿಧಾನಿಕ ಹೊಣೆಗಾರಿಕೆ ಜನಾದೇಶವನ್ನು ರಕ್ಷಿಸುವುದಾಗಿದೆ. ಆದರೆ, ಜನರ ತೀರ್ಪನ್ನು ಬುಡಮೇಲು ಮಾಡುವ ಅದೇ ಶಕ್ತಿಗಳಿಗೆ ಅದು ನೆರವಾಗುತ್ತಿದೆ. ಈ ಹೋರಾಟ ಕೇವಲ ಮಮತಾ ಬ್ಯಾನರ್ಜಿ ಅವರದ್ದಲ್ಲ. ಮುಕ್ತ ಮತ್ತು ನ್ಯಾಯಸಮ್ಮತ ಚುನಾವಣೆಗಳನ್ನು ಬಯಸುವ ಪ್ರತಿಯೊಂದು ರಾಜಕೀಯ ಪಕ್ಷ ಹಾಗೂ ಪ್ರತಿಯೊಬ್ಬ ಮತದಾರನ ಹೋರಾಟವೂ ಇದಾಗಿದೆ" ಎಂದು ಅವರು ತಿಳಿಸಿದ್ದಾರೆ.



ಪ್ರಧಾನಿ ಮೋದಿಗೆ 'ಹುಟ್ಟುಹಬ್ಬದ ಉಡುಗೊರೆ' ಎಂದು ಕಾಂಗ್ರೆಸ್ ವ್ಯಂಗ್ಯ

ಗುರುವಾರವೂ ಚುನಾವಣಾ ಆಯೋಗದ ನಿರ್ಧಾರವನ್ನು ಕಾಂಗ್ರೆಸ್ ತೀವ್ರವಾಗಿ ಟೀಕಿಸಿತ್ತು. ಅಖಿಲ ಭಾರತ ತೃಣಮೂಲ ಕಾಂಗ್ರೆಸ್‌ನ ಹೆಸರು ಮತ್ತು ಚುನಾವಣಾ ಚಿಹ್ನೆಯನ್ನು ಸ್ಥಗಿತಗೊಳಿಸಿರುವುದು ಚುನಾವಣಾ ಆಯೋಗ ತನ್ನ ಸಾಂವಿಧಾನಿಕ ಹೊಣೆಗಾರಿಕೆಯಿಂದ ಹಿಂದೆ ಸರಿದಿರುವುದಕ್ಕೆ ಸಮಾನ ಎಂದು ಪಕ್ಷ ಆರೋಪಿಸಿತ್ತು.

ಅಲ್ಲದೆ, ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರ ಈ ನಿರ್ಧಾರವನ್ನು ಪ್ರಧಾನಿ ನರೇಂದ್ರ ಮೋದಿ ಅವರಿಗೆ ನೀಡಿದ 'ತಡರಾತ್ರಿ ಹುಟ್ಟುಹಬ್ಬದ ಉಡುಗೊರೆ' ಎಂದು ಕಾಂಗ್ರೆಸ್ ವ್ಯಂಗ್ಯವಾಡಿತ್ತು.

# ಕರ್ನಾಟಕ ಸಣ್ಣ, ಜಿಲ್ಲಾ ಪತ್ರಿಕೆಗಳ ಸಂಘದ ಅಧ್ಯಕ್ಷರಾಗಿ ದೇವಪ್ಪ ಲಿಂಗದಾಳ ಆಯ್ಕೆ

**ಸತ್ಯಮಿಥ್ಯ ಸುದ್ದಿಮೂಲ ಗದಗ:**
ಕರ್ನಾಟಕ ಸಣ್ಣ ಮತ್ತು ಜಿಲ್ಲಾ ಪತ್ರಿಕೆಗಳ ಸಂಘದ ಗದಗ ಜಿಲ್ಲಾ ಘಟಕದ ನೂತನ ಅಧ್ಯಕ್ಷರಾಗಿ ವೇರಿ ಗುಡ್ ಮಾರ್ನಿಂಗ್ ದಿನಪತ್ರಿಕೆ ಸಂಪಾದಕರಾದ ದೇವಪ್ಪ ಎನ್. ಲಿಂಗದಾಳ ಅವರು ಅವಿರೋಧವಾಗಿ ಆಯ್ಕೆಯಾಗಿದ್ದಾರೆ..

ಸಂಘದ ರಾಜ್ಯಾಧ್ಯಕ್ಷರಾದ ಶ. ಮಂಜುನಾಥ ಅವರ ನಿರ್ದೇಶನದ ಮೇರೆಗೆ ಸಂಘದ ರಾಜ್ಯ ಕಾರ್ಯದರ್ಶಿ ರಾಜು ಎಂ. ಹೆಬ್ಬಳ್ಳಿ ಅವರ ಅಧ್ಯಕ್ಷತೆಯಲ್ಲಿ ನಡೆದ ಸಂಪಾದಕರ ಸಭೆಯಲ್ಲಿ ಅವರನ್ನು ಸರ್ವಾನುಮತದಿಂದ ಆಯ್ಕೆ ಮಾಡಲಾಯಿತು..

ಖಜಾಂಚಿಯಾಗಿ ಚಕ್ರವರ್ತಿ ದಿನಪತ್ರಿಕೆ ಸಂಪಾದಕರಾದ ಎನ್.ಆರ್. ಭಾಂಡಗೆ, ಉಪಾಧ್ಯಕ್ಷರಾಗಿ ಗದಗ ಸಂಜೆ ದಿನಪತ್ರಿಕೆ ಸಂಪಾದಕರಾದ ರಮೇಶ ಭಜಂತ್ರಿ ಅವರು ಆಯ್ಕೆಯಾದರು..

ಆಯ್ಕೆ ಬಳಿಕ ಮೂವರೂ ಪದಾಧಿಕಾರಿಗಳಿಗೆ ಸನ್ಮಾನಿಸಿ ಮಾತನಾಡಿದ ರಾಜ್ಯ ಕಾರ್ಯದರ್ಶಿ ರಾಜು ಎಂ. ಹೆಬ್ಬಳ್ಳಿ ಅವರು, ಈ ಸಂಘವು 1980ರಲ್ಲಿ ರಾಜ್ಯ ಸರ್ಕಾರದಿಂದ ಮಾನ್ಯತೆ ಪಡೆದಿದೆ.

ಹೀಗಾಗಿ ಈ ಸಂಘವು ಪ್ರತಿ ಜಿಲ್ಲೆಯ ಘಟಕ ರಚನೆ ಮಾಡುತ್ತಿದೆ..

ಇಡೀ ದೇಶದಲ್ಲಿಯೇ ಸರ್ಕಾರವೊಂದು ಗೆಜೆಟ್ ಮೂಲಕ ಮಾನ್ಯತೆ ಪಡೆದ ಏಕೈಕ ಸಂಘ ಇದಾಗಿದೆ ಎಂದು ಹೇಳಿದರು.

ನೂತನ ಅಧ್ಯಕ್ಷ ದೇವಪ್ಪ ಅವರು ಮಾತನಾಡಿ, ಸರ್ಕಾರ ಮತ್ತು ವಾರ್ತಾ ಇಲಾಖೆಯಲ್ಲಿ ಮಾನ್ಯತೆ ಹೊಂದಿರುವ ಕರ್ನಾಟಕ ಸಣ್ಣ ಮತ್ತು ಜಿಲ್ಲಾ ಪತ್ರಿಕೆಗಳ ಸಂಘಕ್ಕೆ ನನ್ನನ್ನು ಜಿಲ್ಲಾಧ್ಯಕ್ಷರನ್ನಾಗಿ ಆಯ್ಕೆ ಮಾಡಿದ್ದಕ್ಕೆ ಸಂಪಾದಕರುಗಳಿಗೆ ಧನ್ಯವಾದಗಳು.

ಈ ಸಂಘವು ಯಾವುದೇ ಸಂಘಕ್ಕೆ ಪರ್ಯಾಯ ಅಲ್ಲ. ಆದರೆ, ಸಂಘಕ್ಕೆ ಯಾರೇ ಬಂದರೂ ಅವರಿಗೆ ಮುಕ್ತವಾಗಿ ಸ್ವಾಗತಿಸುತ್ತೇವೆ. ಪತ್ರಿಕೆಗಳ ಹಿತ ಕಾಪಾಡುವುದು ನಮ್ಮ ಮೂಲ ಉದ್ದೇಶ ಎಂದು ಹೇಳಿದರು.

ಸಭೆಯಲ್ಲಿ ನೂತನ ಖಜಾಂಚಿ ಎನ್.ಆರ್. ಭಾಂಡಗೆ, ಉಪಾಧ್ಯಕ್ಷ ರಮೇಶ ಭಜಂತ್ರಿ, ವಿಭಿನ್ನ ಬರಹ ದಿನಪತ್ರಿಕೆ ಸಂಪಾದಕರಾದ ಸಂತೋಷ ಕುರಿ ಸೇರಿ ಹಲವರಿದ್ದರು.



# ಐದನೇ ದಿನ ವಿಘ್ನ ವಿನಾಯಕನ ಸಂಭ್ರಮದ ವಿಸರ್ಜನೆ

**ಸತ್ಯಮಿಥ್ಯ ಸುದ್ದಿಮೂಲ ಗದಗ:**
ಗದಗ–ಬೆಟಗೇರಿ ಅವಳಿ ನಗರದಲ್ಲಿ ಗಣೇಶೋತ್ಸವದ ಅಂಗವಾಗಿ ಪ್ರತಿಷ್ಠಾಪಿಸಲಾಗಿದ್ದ ವಿಘ್ನ ವಿನಾಯಕನ ಮೂರ್ತಿಗಳನ್ನು ಐದನೇ ದಿನ ಭಕ್ತಿಭಾವ ಹಾಗೂ ಸಂಭ್ರಮದಿಂದ ವಿಸರ್ಜಿಸಲಾಯಿತು.

ಮನೆಗಳು, ಸರ್ಕಾರಿ ಕಚೇರಿಗಳು ಹಾಗೂ ಶಾಲೆಗಳಲ್ಲಿ ಪ್ರತಿಷ್ಠಾಪಿಸಲಾಗಿದ್ದಗಣಪತಿಮೂರ್ತಿಗಳನ್ನುಭಕ್ತರುಮೆರವಣಿಗೆಯ ಮೂಲಕ ವಿಸರ್ಜನಾ ಸ್ಥಳಗಳಿಗೆ ಕೊಂಡೊಯ್ದು ಪೂಜೆ ಸಲ್ಲಿಸಿ ವಿದಾಯ ಹೇಳಿದರು. ನಗರದ ವಿವಿಧ ಭಾಗಗಳಲ್ಲಿ ನಡೆದ ಮೆರವಣಿಗೆಗಳಲ್ಲಿಯುವಕರುಉತ್ಸಾಹದಿಂದಹೆಜ್ಜೆಹಾಕಿಸಂಭ್ರಮದಲ್ಲಿ ಪಾಲ್ಗೊಂಡರು. ಡೊಳ್ಳು–ತಾಷಾ, ಭಜನೆ ಹಾಗೂ ಜಯಘೋಷಗಳ ನಡುವೆ ಗಣಪತಿ ವಿಸರ್ಜನೆ ಕಾರ್ಯಕ್ರಮಗಳು ಶಾಂತಿಯುತವಾಗಿ ನೆರವೇರಿದವು. ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಹಬ್ಬದ ಸಂಭ್ರಮವನ್ನು ಹೆಚ್ಚಿಸಿದರು. ವಿಸರ್ಜನಾ ಮೆರವಣಿಗೆಗಳು ಸುಗಮವಾಗಿ ಹಾಗೂ ಶಾಂತಿಯುತವಾಗಿ ನಡೆಯುವಂತೆ ನಗರದಲ್ಲಿ ಪೊಲೀಸ್ ಇಲಾಖೆ ಕಟ್ಟುನಿಟ್ಟಿನ ಬಂದೋಬಸ್ತ್ ವ್ಯವಸ್ಥೆ ಮಾಡಿತ್ತು. ಪ್ರಮುಖ ವಿಸರ್ಜನಾ ಸ್ಥಳಗಳು ಹಾಗೂ ಮೆರವಣಿಗೆ ಮಾರ್ಗಗಳಲ್ಲಿ ಪೊಲೀಸ್ ಸಿಬ್ಬಂದಿಯನ್ನು ನಿಯೋಜಿಸಿ ಭದ್ರತಾ ಕ್ರಮ ಕೈಗೊಳ್ಳಲಾಗಿತ್ತು.



# ವೈಯಕ್ತಿಕ ಫಲಾನುಭವಿಗೆ 1 ಸ್ಯುಗರ್ ಕೇನ್ ಹಾರ್ವೆಸ್ಟರ್ ಹಬ್ ಯೋಜನೆ

**ಗದಗ:** ಕೃಷಿ ಯಂತ್ರೋಪಕರಣಗಳನ್ನು ಬಾಡಿಗೆ ಆಧಾರದಲ್ಲಿ ರೈತರಿಗೆ ವಿತರಿಸುವ ಉದ್ದೇಶದಿಂದ ಗದಗ ಜಿಲ್ಲೆ ಸಾಮಾನ್ಯ ವರ್ಗ ಘಟಕದ ವೈಯಕ್ತಿಕ ಫಲಾನುಭವಿಗೆ 1 ಸ್ಯುಗರ್ ಕೇನ್ ಹಾರ್ವೆಸ್ಟರ್ ಹಬ್ ಹಾಗೂ 1 ಕಂಬೈನಡ್ ಹಾರ್ವೆಸ್ಟರ್ ಹಬ್ ಕ್ರಿಯಾ ಯೋಜನೆ ಅನುಮೋದನೆಗೊಂಡಿರುತ್ತದೆ. ಆಸಕ್ತ ರೈತರು ಅರ್ಜಿಯನ್ನು ನಿಗದಿತ ನಮೂನೆಯಲ್ಲಿ ಈ ಕೆಳಗಿನ ದಾಖಲಾತಿಯೊಂದಿಗೆ ದಿನಾಂಕ 30–09–2026 ರೊಳಗಾಗಿ ಆಯಾ ತಾಲ್ಲೂಕಿನ ಸಹಾಯಕ ಕೃಷಿ ನಿರ್ದೇಶಕರ ಕಛೇರಿಗೆ ಅರ್ಜಿ ಸಲ್ಲಿಸುವುದು. ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರ ಕಛೇರಿಯಲ್ಲಿ ಅರ್ಜಿಗಳನ್ನು ಪರಿಶೀಲಿಸಿ, ಜಿಲ್ಲಾಮಟ್ಟದ ಉಪಕರಣ ಸಮಿತಿಯ ಸದಸ್ಯ ಕಾರ್ಯದರ್ಶಿಗಳಾದ ಉಪ ಕೃಷಿ ನಿರ್ದೇಶಕರಿಗೆ ಸಲ್ಲಿಸುವುದು. ನಂತರ ಉಪ ಕೃಷಿ ನಿರ್ದೇಶಕರ ಕಛೇರಿಯಿಂದ ಸ್ವೀಕೃತಗೊಂಡ ಅರ್ಜಿಗಳನ್ನು ಪರಿಶೀಲಿಸಿ ಜಿಲ್ಲಾಮಟ್ಟದ ಉಪಕರಣ ಸಮಿತಿಯಲ್ಲಿ ಮಂಡಿಸಲಾಗುವುದು. ಜಿಲ್ಲಾಮಟ್ಟದ ಸಮಿತಿ ಸಭೆಯಲ್ಲಿ ಸ್ಯುಗರ್ ಕೇನ್ ಹಾರ್ವೆಸ್ಟರ್ ಹಬ್ ಹಾಗೂ 1 ಕಂಬೈನಡ್ ಹಾರ್ವೆಸ್ಟರ್ ಹಬ್ ಗೆ ಒಂದಕ್ಕಿಂತ ಹೆಚ್ಚು ಅರ್ಜಿಗಳು ಸಲ್ಲಿಕೆಯಾದಲ್ಲಿ ಲಾಟರಿ ಮುಖಾಂತರ ಫಲಾನುಭವಿಯನ್ನು ಆಯ್ಕೆ ಮಾಡಲಾಗುವುದು. ನಂತರ ಜಂಟಿ ಕೃಷಿ ನಿರ್ದೇಶಕರ ಕಛೇರಿಯಿಂದ ಅಯ್ಕೆಯಾದ ಫಲಾನುಭವಿಗೆ ಕೃಷಿ ಯಂತ್ರೋಪಕರಣಗಳನ್ನು ದಾಸ್ತಾನೀಕರಿಸಲು ಕಾರ್ಯಾದೇಶ ನೀಡಲಾಗುವುದು. ಸ್ಯುಗರಕೇನ್ ಹಾರ್ವೆಸ್ಟರ್ ಮತ್ತು ಕಂಬೈನಡ್ ಹಾರ್ವೆಸರ್ ಹಬ್‌ವಾರು ವಾರು ಸ್ವೀಕೃತವಾದ ಯಂತ್ರೋಪಕರಣಗಳನ್ನು ಸಂಬಂಧಿಸಿದ ರೈತ ಸಂಪರ್ಕ ಕೇಂದ್ರ, ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರು ಮತ್ತು ಉಪ ಕೃಷಿ ನಿರ್ದೇಶಕರು ಪರಿಶೀಲಿಸಿ, ಸಹಾಯಧನವನ್ನು ನಿಯಮಾನುಸಾರ ಸಂಬಂಧಿಸಿದ ಸಾಲದ ಬ್ಯಾಂಕ್ ಖಾತೆಗೆ ಕ್ರೆಡಿಟ್ ಲಿಂಕಡ್ ಬ್ಯಾಕ್ ಎಂಡೆಡ್ ಸಬ್ಸಿಡಿ ಮೂಲಕ ಜಮಾ ಮಾಡಲಾಗುವುದು ಎಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಫಲಾನುಭವಿಗಳು ಅರ್ಜಿಯೊಂದಿಗೆ ಕಡ್ಡಾಯವಾಗಿ ಸಲ್ಲಿಸಬೇಕಾದ ದಾಖಲಾತಿಗಳು:** ಪಹಣಿ ಪ್ರತಿ, ಆಧಾರ ಕಾರ್ಡ್ ಪ್ರತಿ, ಬ್ಯಾಂಕ್ ಪಾಸ್‌ಬುಕ್ ಪ್ರತಿ ಮತ್ತು ಎಫ್‌ಐಡಿ ಸಂಖ್ಯೆ. ರೂ. 100 ಛಾಪಾ ಕಾಗದದ ಮೇಲೆ ಹಬ್‌ನ್ನು ಪರಬಾರೆ ಮಾಡುವುದಿಲ್ಲವೆಂದು ಮುಚ್ಚಳಿಕೆ ಪತ್ರ (ನೋಟರಿಯೊಂದಿಗೆ). ಸಹಾಯಧನವು ಕ್ರೆಡಿಟ್ ಲಿಂಕಡ್ ಬ್ಯಾಕ್ ಎಂಡೆಡ್ ಸಬ್ಸಿಡಿ ಆಗಿರುವುದರಿಂದ ಸಂಬಂಧಿಸಿರುವ ಬ್ಯಾಂಕ್‌ನಿಂದ ತಾತ್ವಿಕ ಸಾಲ ಮಂಜೂರಾತಿ ಪತ್ರ . ಹೆಚ್ಚಿನ ಮಾಹಿತಿಗಾಗಿ ಸಂಬಂಧಿಸಿದ ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರ ಕಛೇರಿ/ಉಪ ಕೃಷಿ ನಿರ್ದೇಶಕರ ಕಛೇರಿ/ಜಂಟಿ ಕೃಷಿ ನಿದೇಶಕರ ಕಛೇರಿಗೆ ಸಂಪರ್ಕಿಸಬಹ್ಮದಾಗಿದೆ.

# ನಟ ಪುನೀತ್ ರಾಜ್‌ಕುಮಾರಗೆ ಅವಹೇಳನ, ಯುವಕನ ತರಾಟೆಗೆ ತೆಗೆದುಕೊಂಡ ಕರ್ನಾಟಕ ಹೈಕೋರ್ಟ್

**ಬೆಂಗಳೂರು:** ಕನ್ನಡ ಚಿತ್ರರಂಗದ ಮೇರು ನಟ, 'ಕರ್ನಾಟಕ ರತ್ನ' ದಿವಂಗತ ಪುನೀತ್ ರಾಜಕುಮಾರ್ ಅವರ ನಿಧನದ ಬೆನ್ನಲ್ಲೇ ಇನ್‌ಸ್ಟಾಗ್ರಾಂನಲ್ಲಿ ಅವಹೇಳನಕಾರಿ ಪೋಸ್ಟ್ ಹಾಕಿದ್ದ ವಿದ್ಯಾರ್ಥಿಗೆ ಕರ್ನಾಟಕ ಹೈಕೋರ್ಟ್ ತೀವ್ರ ತರಾಟೆಗೆ ತೆಗೆದುಕೊಂಡಿದೆ. ಆದಾಗ್ಯೂ, ಯುವಕನ ಭವಿಷ್ಯ ಗಮನದಲ್ಲಿಟ್ಟುಕೊಂಡು, ಆತನ ಮೇಲಿದ್ದ ಕ್ರಿಮಿನಲ್ ಮೊಕದ್ದಮೆಯನ್ನು ನ್ಯಾಯಾಲಯ ರದ್ದುಗೊಳಿಸಿದೆ.

ಬೆಂಗಳೂರಿನ ಸುಬ್ರಹ್ಮಣ್ಯ ನಗರ ಪೊಲೀಸ್ ಠಾಣೆಯಲ್ಲಿ ತನ್ನ ವಿರುದ್ಧ ದಾಖಲಾಗಿದ್ದ ಎಫ್‌ಐಆರ್ ಮತ್ತು ಕಾನೂನು ಪ್ರಕ್ರಿಯೆಯನ್ನು ರದ್ದುಪಡಿಸುವಂತೆ ಕೋರಿ 22 ವರ್ಷದ ರಿತ್ವಿಕ್ ಶರ್ಮಾ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಸೂರಜ್ ಗೋವಿಂದರಾಜ್



ಅವರಿದ್ದ ಏಕಸದಸ್ಯ ಪೀಠವು ಈ ಆದೇಶ ನೀಡಿದೆ.

**ನ್ಯಾಯಪೀಠದಕಟುಮಾತುಗಳು:** ವಿಚಾರಣೆವೇಳೆ ಅರ್ಜಿದಾರನಬೇಜವಾಬ್ದಾರಿಯುತನಡವಳಿಕೆಗೆ ನ್ಯಾಯಾಲಯ ಕಟು ಶಬ್ದಗಳಿಂದ ಆಕ್ಷೇಪ ವ್ಯಕ್ತಪಡಿಸಿತು. "ಅರ್ಜಿದಾರ ಯಾವ ಅರ್ಥದಲ್ಲಿ ಈ ಪೋಸ್ಟ್ ಮಾಡಿದ್ದಾನೆ ಮತ್ತು ಆ ಸಂದರ್ಭ ಎಂಥದ್ದು ಎಂಬುದನ್ನು ಗಮನಿಸಬೇಕು. ಇಡೀ ನಾಡೇ ಗೌರವಿಸುವ ಪುನೀತ್ ರಾಜಕುಮಾರ್ ಅವರ ಅಕಾಲಿಕ ನಿಧನದ ಸಂದರ್ಭದಲ್ಲಿ ಇಂತಹ ಕೆಟ್ಟ ಸಂದೇಶ ಹಾಕಿರುವುದು ಅಕ್ಷಮ್ಯ ಮತ್ತು ದುಃಖಕರ. ಸೋಷಿಯಲ್ ಮೀಡಿಯಾ ಸಿಕ್ಕಿದೆ ಎಂದಮಾತ್ರಕ್ಕೆ ಏನು ಬೇಕಾದರೂ ಪೋಸ್ಟ್ ಮಾಡಬಹುದೇ? ಪುನೀತ್ ಯುವಜನತೆಯ ಮದ್ಯಪಾನ ಚಟವನ್ನು ವಿರೋಧಿಸುತ್ತಿದ್ದವರು. ಅಂತಹ ವ್ಯಕ್ತಿಯ ಸಾವಿನ ವೇಳೆ ಬಿಯರ್ ಬಾಟಲಿ ಮುಂದಿಟ್ಟುಕೊಂಡು ಅಸಭ್ಯ ಪದ ಬಳಸಿರುವುದು ಅತ್ಯಂತ ಆಕ್ಷೇಪಾರ್ಹ ಹಾಗೂ ಐಟಿ ಕಾಯ್ದೆಯಡಿ ಅಪರಾಧ," ಎಂದು ಪೀಠ ಎಚ್ಚರಿಸಿತು.

SATYAMITHI KANNADA DAILY MORNING OWNER, PUBLISHER, BY: CHANNAVEERAPPA NINGAPPA SAMAGANDI PUBLISHED FROM: KELAGAL{ETH, NEAR BASAVESHWAR DEVASTAN, HOME NO. 169, WARD NO, 4 MAIN ROAD GAJEDRAGAD, GADAG KARNATAKA - 582114 PRINTED AT: MAILARALINGESHWAR PRINTERS, WARD NO, 3, SUDI TQ, GAJENDRAGAD, GADAG, KARNATAKA- 582114